# ಕರಾವಳಿ ತರಂಗಿಣಿ

ಕಡಲ ಕಿನಾರೆಯಿಂದ ಕೆಂಪು ಕೋಟೆಯವರೆಗೆ..

ಕನ್ನಡ ವಾರಪತ್ರಿಕೆ

**ಸುಭಾಷಿತ:**

ಉಪಕರಿಸಿದವರನ್ನ ಎಂದೆಂದಿಗೂ ಮರೆಯಬೇಡ..
ಅಪಕರಿಸಿದವರನ್ನ ಯಾವತ್ತಿಗೂ ನೆನೆಯಬೇಡ..
ಉಂಡು ತಿಂದು ತೇಗಿದವರ ಹತ್ತಿರ ಸುಳಿಯಬೇಡ..
ಶ್ರೀಮಂತರ ಸಂಗಬೇಡ.. ಬಡವರ ಸಲಿಗೆ ಬೇಡ..
ಜನರಿಂದ ದೋಚಿ ದೇವರಿಗೆ ಅರ್ಪಣೆ ಮಾಡಬೇಡ..
ನಾನು ನನ್ನದು ಎಂಬ ಅಹಂಕಾರ ಬೇಡವೆ ಬೇಡ..
ನೀ ಬಂದ ಕಾರ್ಯವ ಮರೆತು ನಡೆಯಬೇಡ..
ಇನ್ನೊಬ್ಬರಿಂದ ನಿರೀಕ್ಷೆ ಇಟ್ಟು ಬದುಕಬೇಡ..
ಪರರಿಗೆ ನೆರವಾದರೆ ಅವರಿಂದ ಅಪೇಕ್ಷೆ ಪಡಬೇಡ..
ಕೊಡುವವನು ಕೊಳ್ಳುವವನು ಒಬ್ಬನೇ ಪರಮಾತ್ಮ...
**ಭಗವಾನ್ ಶ್ರೀಕೃಷ್ಣ**



PRGI No: KNKAN/25/A2498 www.karavalitharangini.com KARAVALI THARANGINI KANNADA Weekly Dakshina Kannada ದಿನಾಂಕ: 17-10-2025 to 23-10-2025 ಬೆಲೆ:10-00 ಸಂಪುಟ–1 ಸಂಚಿಕೆ–3 ಪುಟಗಳು–6





ಕ್ಷಣ ಕ್ಷಣದ ಸುದ್ದಿಗಳಿಗಾಗಿ
ಕರಾವಳಿ ತರಂಗಿಣಿ
ಪತ್ರಿಕಾ ಬಳಗದಿಂದ
ಅಂತರ್ಜಾಲ ಮಾಧ್ಯಮ
www.karavalitharangini.com
ಕರಾವಳಿ ತರಂಗಿಣಿ
ಮಂಗಳೂರು





ಮಂಗಳೂರು ನಗರದ ಪಂಪ್‌ವೆಲ್ ಸರ್ಕಲ್‌ನಿಂದ ಕಂಕನಾಡಿ ಬೈಪಾಸ್‌ವರೆಗೆ ರಸ್ತೆ ಅಭಿವೃದ್ಧಿ ಕಾಮಗಾರಿ ಕೈಗೊಳ್ಳಲಾಗುತ್ತಿದೆ. ಆದ್ದರಿಂದ 2026ರ ಎಪ್ರಿಲ್ 15ರವರೆಗೆ (ಏಳು ತಿಂಗಳು) ವಾಹನಗಳ ಸಂಚಾರದಲ್ಲಿ ಮಾರ್ಪಾಡು ಮಾಡಿ ನಗರ ಪೊಲೀಸ್ ಆಯುಕ್ತರು ತಾತ್ಕಾಲಿಕ ಅಧಿಸೂಚನೆ ಹೊರಡಿಸಿದ್ದಾರೆ. ಈ ರಸ್ತೆಯ ಪ್ರಥಮ ಹಾಗೂ ದ್ವಿತೀಯ ಹಂತದ ಅಭಿವೃದ್ಧಿ ಕಾಮಗಾರಿ ನಡೆಯುವ ವೇಳೆ ದ್ವಿಮುಖ ರಸ್ತೆಯ ಒಂದು ಭಾಗವನ್ನು ಕರಾವಳಿ ಜಂಕ್ಷನ್‌ನಿಂದ ಪಂಪ್‌ವೆಲ್‌ವರೆಗೆ ವಾಹನಗಳು ಸಂಚರಿಸಲು ತಾತ್ಕಾಲಿಕವಾಗಿ ಏಕಮುಖ ರಸ್ತೆಯಾಗಿ ರುತ್ತದೆ. ಅದೇ ರೀತಿ ಪಂಪ್‌ವೆಲ್‌ನಿಂದ ಕಂಕನಾಡಿ ಓಲ್ಡ್ ರಸ್ತೆ – ಕಂಕನಾಡಿ ಜಂಕ್ಷನ್ ರಸ್ತೆಯನ್ನು ತಾತ್ಕಾಲಿಕವಾಗಿ ಏಕಮುಖ ರಸ್ತೆಯನ್ನಾಗಿಸಲಾಗಿದೆ.

## ಪ್ರಧಾನಿ ಮೋದಿಗೆ ಟ್ರಂಪ್ ಕಂಡರೆ ಭಯ : ರಾಹುಲ್ ಗಾಂಧಿ




ನವದೆಹಲಿ: ಪ್ರಧಾನಿ ನರೇಂದ್ರ ಮೋದಿ ಅವರು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರನ್ನು ನೋಡಿ ಭಯಗೊಂಡಿದ್ದಾರೆ ಎಂದು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಟೀಕಿಸಿದ್ದಾರೆ. ರಷ್ಯಾದಿಂದ ತೈಲ ಖರೀದಿಸಬೇಕಾ ಅಥವಾ ಬೇಡಾ ಎಂಬ ಕುರಿತು ನಿರ್ಧರಿಸಲು ಮತ್ತು ಘೋಷಿಸಲು ಅವರು ಅಮೆರಿಕ ನಾಯಕರಿಗೆ ಅವಕಾಶ ಕೊಡುತ್ತಿದ್ದಾರೆ ಎಂದು ಲೇವಡಿ ಮಾಡಿದ್ದಾರೆ. ರಷ್ಯಾದಿಂದ ತೈಲ ಖರೀದಿಯನ್ನು ನಿಲ್ಲಿಸುವುದಾಗಿ ತಮ್ಮ ಸ್ನೇಹಿತ ಪ್ರಧಾನಿ ಮೋದಿ ಭರವಸೆ ನೀಡಿದ್ದಾರೆ ಎಂಬ ಟ್ರಂಪ್ ಹೇಳಿಕೆಯ ಬೆನ್ನಲ್ಲೇ ಈ ಟೀಕೆ ವ್ಯಕ್ತಪಡಿಸಿದ್ದಾರೆ. ಭಾರತವು ರಷ್ಯಾದ ತೈಲವನ್ನು ಖರೀದಿಸುವುದಿಲ್ಲ ಎಂದು ನಿರ್ಧರಿಸಲು ಮತ್ತು ಘೋಷಿಸಲು ಟ್ರಂಪ್‌ಗೆ ಅವಕಾಶ ನೀಡುತ್ತಿದ್ದಾರೆ. ಪದೇ ಪದೇ ತಿರಸ್ಕಾರದ ಹೊರತಾಗಿಯೂ

## ಹೆಣ್ಣಿಗೆ ಪ್ರಾಶಸ್ತ್ಯ ಇರುವ ಜಿಲ್ಲೆಯಲ್ಲೇ ಹೆಣ್ಣು ಮಕ್ಕಳ ಜನನ ಇಳಿಕೆ!





ಮಂಗಳೂರು: ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಹೆಚ್ಚಿನ ಸಮುದಾಯಗಳು ಅಳಿಯಕಟ್ಟಿನ ಸಂಪ್ರದಾಯ ಹೊಂದಿರುವುದರಿಂದ ಇಲ್ಲಿ ಹೆಣ್ಣಿಗೆ ಪ್ರಾಶಸ್ತ್ಯ ಹೆಚ್ಚು. ಅಳಿಯಕಟ್ಟಿನ ಪ್ರಕಾರ ಹೆಣ್ಣು ಮಕ್ಕಳಿಂದ ಕುಟುಂಬ ಬೆಳೆಯುತ್ತದೆ. ಅವಿಭಾಜ್ಯ ಕರಾವಳಿ ಜಿಲ್ಲೆಯನ್ನು ಬೇರೆ ಜಿಲ್ಲೆಗಳಿಗೆ ಹೋಲಿಸಿದರೆ ಎಲ್ಲಾ ರಂಗದಲ್ಲೂ ಪುರುಷರಷ್ಟೇ ಮಹಿಳೆಯರು ಇಲ್ಲಿ ಪ್ರಾಬಲ್ಯ ಹೊಂದಿದ್ದಾರೆ. ಆದರೆ ಇತ್ತೀಚಿನ ವರದಿಗಳ ಪ್ರಕಾರ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಹೆಣ್ಣು ಮಕ್ಕಳ ಜನನ ಪ್ರಮಾಣ ಕಡಿಮೆಯಾಗಿ, ಲಿಂಗಾನುಪಾತದಲ್ಲಿ ಇಳಿಕೆಯಾಗಿ ಆತಂಕ ಸೃಷ್ಟಿಸಿದೆ. ದ.ಕ.ಜಿಲ್ಲೆಯ ಕಳೆದ 10 ವರ್ಷಗಳ ದಾಖಲೆಗಳನ್ನು ಗಮನಿಸಿದರೆ ಪ್ರತಿ ವರ್ಷ

## ದೀಪಾವಳಿ ಕೊಡುಗೆ ನೆಪದಲ್ಲಿ ಸರಕಾರದಿಂದ ಸುಲಿಗೆ : ಎಚ್‌ಡಿಕೆ



ಬೆಂಗಳೂರು: ದೀಪಾವಳಿ ಕೊಡುಗೆ ಕೊಡುತ್ತಿದ್ದೇವೆ ಎಂದು ಹೇಳಿ ರಾಜ್ಯ ಸರಕಾರ ಬೆಂಗಳೂರು ಜನರ ಕಿಸೆಗೆ ಕೈ ಹಾಕಿದೆ. 'ಎ' ಖಾತಾ ಸೋಗಿನಲ್ಲಿ 15,000 ಕೋಟಿ ರೂ. ಸುಲಿಗೆ ಮಾಡುತ್ತಿದೆ ಎಂದು ಕೇಂದ್ರ ಸಚಿವರಾದ ಎಚ್.ಡಿ.ಕುಮಾರಸ್ವಾಮಿ ಅವರು ಆರೋಪ ಮಾಡಿದರು. ದೀಪಾವಳಿ ಕೊಡುಗೆ ಎಂದರೆ ಏನೋ ನಮಗೆ ದೊಡ್ಡ ಕೊಡುಗೆಯನ್ನು ಕೊಡುತ್ತದೆ ಎಂದು ಜನರು ಭಾವಿಸಿದ್ದರು. ದೊಡ್ಡ ದೊಡ್ಡ ಜಾಹೀರಾತುಗಳನ್ನು ನೋಡಿ ನಾನು ಕೂಡ ಹಾಗೆಯೇ ಅಂದುಕೊಂಡಿದ್ದೆ. ಆದರೆ, ಅದು




# ಹೆಣ್ಣಿಗೆ ಪ್ರಾಶಸ್ತ್ಯ ಇರುವ ಜಿಲ್ಲೆಯಲ್ಲೇ ಹೆಣ್ಣು ಮಕ್ಕಳ ಜನನ ಇಳಿಕೆ!

**ಒಂದನೇ ಪುಟದಿಂದ......**

ಹೆಣ್ಣು ಮಕ್ಕಳ ಜನನ ಪ್ರಮಾಣ ಗಂಡು ಮಕ್ಕಳಿಗೆ ಹೋಲಿಸಿದರೆ ಕಡಿಮೆಯಿದೆ. ಲಿಂಗಾನುಪಾತದಲ್ಲಿ ವ್ಯತ್ಯಾಸ ಕಂಡುಬರುತ್ತಿದೆ. ವಿಶೇಷವಾಗಿ ಫಲವತ್ತತೆಯ ದರದಲ್ಲೂ ಇಳಿಮುಖವಾಗುತ್ತಿದ್ದು, ಇದು ಆತಂಕದ ವಿಚಾರವಾಗಿದೆ. 2017-18ರಲ್ಲಿ 15085 ಗಂಡು - 14332 ಹೆಣ್ಣು, ಲಿಂಗಾನುಪಾತ 950, 2018-19ರಲ್ಲಿ 14627 ಗಂಡು-13964 ಹೆಣ್ಣು, ಲಿಂಗಾನುಪಾತ 954, 2019-20ರಲ್ಲಿ 14055 ಗಂಡು-13256 ಹೆಣ್ಣು, ಲಿಂಗಾನುಪಾತ 943. 2020-21ರಲ್ಲಿ 13169 ಗಂಡು- 12677 ಹೆಣ್ಣು. ಲಿಂಗಾನುಪಾತ 963. 2021-22ರಲ್ಲಿ 13797 ಗಂಡು- 13075 ಹೆಣ್ಣು, ಲಿಂಗಾನುಪಾತ 948. 2022-23ರಲ್ಲಿ 13936 ಗಂಡು-13415 ಹೆಣ್ಣು, ಲಿಂಗಾನುಪಾತ 963, 2023-24ರಲ್ಲಿ 13171 ಗಂಡು-12685 ಹೆಣ್ಣು, ಲಿಂಗಾನುಪಾತ 963. 2024-25ರಲ್ಲಿ 12431 ಗಂಡು- 11660 ಹೆಣ್ಣು, ಲಿಂಗಾನುಪಾತ 938. 2025-26 (ಆಗಸ್ಟ್‌ವರೆಗೆ) 5329 ಗಂಡು-5032 ಹೆಣ್ಣು, ಲಿಂಗಾನುಪಾತ 944. ಆದರೆ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಹೆಣ್ಣು ಮಕ್ಕಳ ಜನನ ಸಂಖ್ಯೆ ಕಡಿಮೆಯಾಗಲು ನಿಖರ ಕಾರಣ ತಿಳಿದುಬಂದಿಲ್ಲ. ಆದರೆ ಕೆಲವು ಕುಟುಂಬಗಳು ಮೊದಲ ಮಗು ಗಂಡಾದರೆ ಒಂದೇ ಮಗು ಸಾಕು ಎಂಬ ನಿರ್ಧಾರಕ್ಕೆ ಬರುತ್ತಿರುವುದು, ಮೊದಲ ಮಗು ಹೆಣ್ಣಾದರೆ ಮಾತ್ರವೇ 2ನೇ ಮಗುವಿನ ಬಗ್ಗೆ ಯೋಚಿಸುವುದು ಅದಕ್ಕೆ ಕಾರಣ ಎಂದು ಹೇಳಲಾಗುತ್ತಿದೆ. ಈ ಎಲ್ಲ ಕಾರಣಗಳಿಂದ ಲಿಂಗಾನುಪಾತ ವ್ಯತ್ಯಾಸವಾಗುತ್ತಿರಬಹುದು. ಅದರೊಂದಿಗೆ ಬದಲಾಗುತ್ತಿರುವ ಜೀವನ ಶೈಲಿ, ಆಹಾರ ಪದ್ಧತಿ, ಕೆಲಸದಲ್ಲಿ ವಿಪರೀತ ಒತ್ತಡ ಜತೆಗೆ ದಂಪತಿಗಳಲ್ಲಿ ಇರುವ ಸಮಯದ ಅಭಾವ ಸೇರಿದಂತೆ ಹತ್ತಾರು ವಿಚಾರಗಳಿಂದ ಇಂದಿನ ದಂಪತಿಗಳಲ್ಲಿ ಮಕ್ಕಳನ್ನು ಪಡೆಯುವ ಶಕ್ತಿ ಕಡಿಮೆಯಾಗುತ್ತಿದೆ.

# ದೀಪಾವಳಿ ಕೊಡುಗೆ ನೆಪದಲ್ಲಿ ಸರಕಾರದಿಂದ ಸುಲಿಗೆ : ಎಚ್‌ಡಿಕೆ

**ಒಂದನೇ ಪುಟದಿಂದ......**

ದೀಪಾವಳಿ ಹೆಸರಿನಲ್ಲಿ ಜನರಿಗೆ ಮಾಡುತ್ತಿರುವ ಮಹಾನ್ ದೋಖಾ ಇದಾಗಿದೆ ಎಂದು ಕಿಡಿಕಾರಿದರು. ಬೆಂಗಳೂರು ನಗರ ಜನರಿಗೆ ದೀಪಾವಳಿ ಕೊಡುಗೆ ನೀಡಲು ಶಾಕ್ ಕೊಡ್ತಿದ್ದಾರೆ. ಅದು ಹೇಗಿದೆ ಎಂದರೆ, ಬಿ ಖಾತಾದಿಂದ ಎ ಖಾತಾಗೆ ಪರಿವರ್ತನೆ ಮಾಡುವ ಅರ್ಜಿಗೆ 500 ರೂಪಾಯಿ ಶುಲ್ಕ ತುಂಬಬೇಕು. ಆ ಶುಲ್ಕದ ಹೆಸರಿನಲ್ಲಿಯೇ ನೂರಾರು ಕೋಟಿ ರೂಪಾಯಿ ಸುಲಿಗೆ ಮಾಡುತ್ತಿದೆ ಈ ಸರಕಾರ. 30/40 ನಿವೇಶನಕ್ಕೆ 4 ರಿಂದ 8 ಲಕ್ಷ ರೂಪಾಯಿವರೆಗೂ ಕಿತ್ತುಕೊಳ್ಳುತ್ತಿದ್ದಾರೆ. ಮೊದಲು 10 ರಿಂದ 13 ಸಾವಿರ ರೂಪಾಯಿ ಅಷ್ಟನ್ನೇ ಕಟ್ಟಬೇಕಿದ್ದ ಬೆಂಗಳೂರು ಜನರು ಇನ್ನು ಮುಂದೆ ಲಕ್ಷಗಳಲ್ಲಿ ಹಣ ಏರಬೇಕಿದೆ. ಎ ಖಾತಾ ದಂಧೆಯ ಮೂಲಕ ರಾಜ್ಯ ಸರಕಾರ 15,000 ಕೋಟಿ ರೂಪಾಯಿ ವಸೂಲಿ ಮಾಡುತ್ತಿದೆ ಎಂದು ಆರೋಪ ಮಾಡಿದರು. ಗ್ಯಾರಂಟಿ ಕೊಟ್ಟು ಜನರ ಬದುಕು ಹಸನು ಮಾಡೋದು ಎಂದರೆ ಹೀಗೆನಾ? ಜನರ ಮೇಲೆ ತೆರಿಗೆ ವಿಧಿಸಿ 6ನೇ ಗ್ಯಾರಂಟಿ ಕೊಡಲು ಹೊರಟಿದ್ದಾರೆ. ಈ ಸರಕಾರ ಬಂದ ಮೇಲೆ ನಿರಂತರವಾಗಿ ಸುಲಿಗೆ ಮಾಡುತ್ತಿದೆ. ಕೇವಲ ಹಣ ಮಾಡುವುದಕ್ಕೆ ಸರಕಾರ ಹೊರಟಿದೆ. ಪ್ರತಿಯೊಂದರಲ್ಲಿ ದುಡ್ಡು ಮಾಡುವ ಬಗ್ಗೆಯಷ್ಟೇ ಯೋಚನೆ ಮಾಡುತ್ತಿದೆ ಎಂದು ಟೀಕಿಸಿದರು. ಈ ಸರಕಾರದಲ್ಲಿ ಹಣ ಇಲ್ಲ. ಅದಕ್ಕೆ ಕಂಡ ಕಂಡ ಕಡೆ ಹಣಕ್ಕೆ ಕೈ ಹಾಕುತ್ತಿದೆ. ಬೆಂಗಳೂರಿನ ಗುಂಡಿ ಮುಟ್ಟೋದು ಇರಲಿ. ರಾಜ್ಯದಲ್ಲಿರುವ ಗುಂಡಿಗಳನ್ನೂ ಮುಟ್ಟೋಕೆ ಇವರಿಂದ ಆಗುತ್ತಿಲ್ಲ ಎಂದು ತರಾಟೆಗೆ ತೆಗೆದುಕೊಂಡ ಸಚಿವರು, ಜೆಡಿಎಸ್ ಕೊಡುಗೆ ಏನು ಎಂದು ಹಾಸನದಲ್ಲಿ ಸಿಎಂ ಪ್ರಶ್ನೆ ಮಾಡಿದ್ದಾರೆ. ನನ್ನ ಆರೋಗ್ಯ ವಿಚಾರಿಸಲು ಕಾಂಗ್ರೆಸ್ ಪಕ್ಷದ ಹಿರಿಯ ನಾಯಕರೊಬ್ಬರು ದೆಹಲಿಗೆ ಬಂದಿದ್ದರು. 2018ರಲ್ಲಿ ನೀವು ಕೊಟ್ಟ 500 ಕೋಟಿ ರೂಪಾಯಿ ಅನುದಾನದಲ್ಲಿಯೇ ಇನ್ನೂ ಕೆಲಸ ನಡೆಯುತ್ತಿದೆ ಎಂದು ಅವರೇ ಹೇಳುತ್ತಾರೆ. ಅನುದಾನದ ಬಗ್ಗೆ ಮಾತನಾಡುವ ಮುಖ್ಯಮಂತ್ರಿಗಳು, ನಾನು ಅಧಿಕಾರದಲ್ಲಿ ಇದ್ದಾಗ ಎಷ್ಟು ಕೊಟ್ಟಿದ್ದೇನೆ, ಇವರು ಎಷ್ಟು ಕೊಟ್ಟಿದ್ದಾರೆ ಎಂಬ ಬಗ್ಗೆ ಜನರ ಮುಂದೆ ದಾಖಲೆ ಇಡಲಿ ಎಂದು ಸವಾಲು ಹಾಕಿದರು.

# ಪ್ರಧಾನಿ ಮೋದಿಗೆ ಟ್ರಂಪ್ ಕಂಡರೆ ಭಯ: ರಾಹುಲ್ ಗಾಂಧಿ

**ಒಂದನೇ ಪುಟದಿಂದ......**

ಅಭಿನಂದನಾ ಸಂದೇಶಗಳನ್ನು ಕಳುಹಿಸುತ್ತಲೇ ಇರುತ್ತಾರೆ. ಅಮೆರಿಕಕ್ಕೆ ಹಣಕಾಸು ಸಚಿವರ ಭೇಟಿಯನ್ನು ರದ್ದುಗೊಳಿಸಲಾಗಿದೆ. ಶರ್ಮ್ ಎಲ್ ಶೇಖ್ ಅವರನ್ನು ಬಿಟ್ಟುಬಿಡಲಾಗಿದೆ. ಆಪರೇಷನ್ ಸಿಂಧೂರ್ ಬಗ್ಗೆ ಅವರ ಹೇಳಿಕೆಯನ್ನು ವಿರೋಧಿಸುತ್ತಿಲ್ಲ ಎಂದು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ರಾಹುಲ್ ಗಾಂಧಿ ಪೋಸ್ಟ್ ಮಾಡಿದ್ದಾರೆ. ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ, ಸಂವಹನ ಉಸ್ತುವಾರಿ ಜೈರಾಮ್ ರಮೇಶ್ ಕೂಡ ಈ ವಿಷಯದ ಬಗ್ಗೆ ಕೇಂದ್ರ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿ, ಮೇ 10ರಂದು ಭಾರತ ಆಪರೇಷನ್ ಸಿಂಧೂರ ಸ್ಥಗಿತಗೊಳಿಸಿದೆ ಎಂದು ಮೊದಲು ಘೋಷಿಸಿದವರು ಅಮೆರಿಕದ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರುಬಿಯೊ. ಇದಾದ ಬಳಿಕ ಅಮೆರಿಕ ಅಧ್ಯಕ್ಷ ಟ್ರಂಪ್ ಸುಂಕ ಮತ್ತು ವ್ಯಾಪಾರದ ಅಸ್ತ್ರವನ್ನು ಬಳಕೆ ಮಾಡಿ ಆಪರೇಷನ್ ಸಿಂಧೂರ್‌ನ್ನು ನಿಲ್ಲಿಸಲು ಮಧ್ಯಪ್ರವೇಶ ಮಾಡಿದ್ದಾಗಿ ಹೇಳಿಕೊಂಡರು. ಆದರೆ ನಮ್ಮ ಪ್ರಧಾನಿ ಮೌನವಾಗಿದ್ದರು. ಈಗ ಭಾರತವು ರಷ್ಯಾದಿಂದ ತೈಲ ಆಮದು ಮಾಡಿಕೊಳ್ಳುವುದಿಲ್ಲ ಎಂದು ಮೋದಿ ಭರವಸೆ ನೀಡಿದ್ದಾರೆ ಎಂದು ಅಧ್ಯಕ್ಷ ಟ್ರಂಪ್ ಘೋಷಿಸಿದ್ದಾರೆ. ಈ ಮೂಲಕ ಪ್ರಮುಖ ನಿರ್ಧಾರಗಳನ್ನು ಅಮೆರಿಕಕ್ಕೆ ಹೊರಗುತ್ತಿಗೆ ನೀಡಿದಂತೆ ಕಾಣುತ್ತದೆ. 56 ಇಂಚಿನ ಎದೆ ಕುಗ್ಗಿದೆ ಎಂದು ರಮೇಶ್ ಕುಟುಕಿದ್ದಾರೆ.

# ಕೊಡವ ಸಾಹಿತ್ಯ ಅಕಾಡೆಮಿಯ ಪುಸ್ತಕ ಬಹುಮಾನಕ್ಕೆ ಅರ್ಜಿ ಆಹ್ವಾನ

ಮಡಿಕೇರಿ : ಕರ್ನಾಟಕ ಕೊಡವ ಸಾಹಿತ್ಯ ಅಕಾಡೆಮಿಯಿಂದ ಕಳೆದ 2024-25ನೇ ಸಾಲಿನ ಕೊಡವ ಪುಸ್ತಕ ಬಹುಮಾನಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗೆ ಅಕಾಡೆಮಿ ಕಚೇರಿ ದೂ. 8762942976ಯನ್ನು ಸಂಪರ್ಕಿಸಬಹುದು ಎಂದು ತಿಳಿಸಿದ್ದಾರೆ.

# ಜೇನುಗಾರಿಕೆ ತರಬೇತಿಗೆ ಅರ್ಜಿ ಆಹ್ವಾನ

ಮಡಿಕೇರಿ-ಪ್ರಸಕ್ತ (2025-26) ಸಾಲಿಗೆ ಭಾಗಮಂಡಲ ಜೇನುಗಾರಿಕೆ ತರಬೇತಿ ಕೇಂದ್ರದಲ್ಲಿ 2025-26ನೇ ಸಾಲಿನಲ್ಲಿ ರೈತರ ಮಕ್ಕಳಿಗೆ 3ತಿಂಗಳ ಜೇನುಗಾರಿಕೆ ತರಬೇತಿ ಕಾರ್ಯಕ್ರಮವು 2025ರ ನವೆಂಬರ್, 04ರಿಂದ 2026ರ ಫೆಬ್ರವರಿ, 03ರವರೆಗೆ (ಪುರುಷ ಅಭ್ಯರ್ಥಿಗಳು ಮಾತ್ರ) ನಡೆಯಲಿದೆ. ಈ ಸಂಬಂಧ ಕೊಡಗು ಜಿಲ್ಲೆಯಿಂದ ಒಂದು ಅಭ್ಯರ್ಥಿಯನ್ನು ಆಯ್ಕೆ ಮಾಡಲು ಅವಕಾಶವಿದ್ದು, ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

# ಅಂಧತ್ವ ನಿಯಂತ್ರಣ ಕಾರ್ಯಕ್ರಮದಡಿ ಎನ್‌ಜಿಒಗಳಿಂದ ಅರ್ಜಿ ಆಹ್ವಾನ

ಶಿವಮೊಗ್ಗ : ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘವು 2025-26ನೇ ಸಾಲಿಗೆ ಆರೋಗ್ಯ ಇಲಾಖೆ, ರಾಷ್ಟ್ರೀಯ ಅಂಧತ್ವ ನಿಯಂತ್ರಣ ಕಾರ್ಯಕ್ರಮದಡಿ 'ಕಣ್ಣಿನ ಪೊರೆ ಶಸ್ತ್ರಚಿಕಿತ್ಸಾ ಶಿಬಿರ ಹಾಗೂ ಇತರ ಕಣ್ಣಿನ ಖಾಯಿಲೆಗಳ ಚಿಕಿತ್ಸೆ' ಕಾರ್ಯಕ್ರಮಕ್ಕಾಗಿ ಆಸಕ್ತಿಯುಳ್ಳ ಹಾಗೂ ಅನುಭವವುಳ್ಳ ಅರ್ಹ ಸ್ವಯಂ ಸೇವಾ ಸಂಸ್ಥೆಗಳಿಂದ (ಎನ್‌ಜಿಒ) ಅರ್ಜಿ ಆಹ್ವಾನಿಸಿದೆ. ಹೆಚ್ಚಿನ ಮಾಹಿತಿ ಹಾಗೂ ವಿವರಗಳಿಗೆ ವೆಬ್‌ಸೈಟ್ https://kppp.karnataka.gov.in/#/portal/portal-home ಹಾಗೂ ಜಿಲ್ಲಾ ಅಂಧತ್ವ ನಿಯಂತ್ರಣ ಕಾರ್ಯಕ್ರಮ ವಿಭಾಗ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿ, ಶಿವಮೊಗ್ಗ, ದೂ.ಸಂಖ್ಯೆ: 8197094440/08182-222382 ಗಳನ್ನು ಸಂಪರ್ಕಿಸಬಹುದು.


# ಗ್ರಾಮೀಣ ಪತ್ರಕರ್ತರಿಗೆ ಉಚಿತ ಬಸ್ ಪಾಸ್‌ಗೆ ಅರ್ಜಿ ಆಹ್ವಾನ

ಮಂಗಳೂರು - ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ಮಾಧ್ಯಮ ಪಟ್ಟಿಯಲ್ಲಿರುವ ಮಾಧ್ಯಮ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ತಾಲ್ಲೂಕು ಮಟ್ಟದ ಪತ್ರಕರ್ತರು ತಮ್ಮ ವೃತ್ತಿ ನಿರತ ಚಟುವಟಿಕೆಗಳ ಸಂಬಂಧ ತಮ್ಮ ಜಿಲ್ಲಾದ್ಯಂತ ಉಚಿತವಾಗಿ ಸಂಚರಿಸಲು ಅನುಕೂಲವಾಗುವಂತೆ ಉಚಿತ ಬಸ್‌ಪಾಸ್ ನೀಡಲು ಅರ್ಜಿಆಹ್ವಾನಿಸಲಾಗಿದೆ.

# ಕಾನೂನು ನೆರವು ಅಭಿರಕ್ಷಕರ ಹುದ್ದೆಗೆ ಅರ್ಜಿ ಆಹ್ವಾನ

ಮಂಗಳೂರು - ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದಲ್ಲಿ ಖಾಲಿ ಇರುವ 3 ಉಪ ಮುಖ್ಯ ಕಾನೂನು ನೆರವು ಅಭಿರಕ್ಷಕರನ್ನು ನೇಮಕ ಮಾಡಿಕೊಳ್ಳಲು ಅರ್ಜಿಯನ್ನು ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗೆ ಹಾಗೂ ಅರ್ಜಿಗಾಗಿ ದ.ಕ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಕಛೇರಿಯ ದೂರವಾಣಿ ಸಂ: 08242448111 ಸಂಪರ್ಕಿಸಬಹುದಾಗಿದೆ.

# ಮುಸ್ಲಿಮರ ಓಲೈಕೆಗೆ ಕಾಂಗ್ರೆಸಿಗರು ಘನತೆಯನ್ನು ಕಳೆದುಕೊಳ್ಳುತ್ತಿದ್ದಾರೆ–ಕಾಮತ್




ಮಂಗಳೂರು: ರಾಜ್ಯದಲ್ಲಿ ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಚಟುವಟಿಕೆಗಳನ್ನು ನಿಷೇಧಿಸಬೇಕೆಂದು ಆಗ್ರಹಿಸುತ್ತಿರುವ ಪ್ರಿಯಾಂಕ್ ಖರ್ಗೆ, ಬಿ.ಕೆ ಹರಿಪ್ರಸಾದ್‌ರಂತಹ ಕಾಂಗ್ರೆಸ್ ನಾಯಕರು, ಕೇವಲ ಮುಸ್ಲಿಮರ ಓಲೈಕೆ ಹಾಗೂ ರಾಹುಲ್ ಗಾಂಧಿಯನ್ನು ಮೆಚ್ಚಿಸಲು ತಮ್ಮ ಸ್ಥಾನದ ಘನತೆಯನ್ನು ಕಳೆದುಕೊಳ್ಳುತ್ತಿದ್ದಾರೆ ಎಂದು ಶಾಸಕ ವೇದವ್ಯಾಸ ಕಾಮತ್ ರವರು ಹೇಳಿದರು. ಪ್ರಿಯಾಂಕ್ ಖರ್ಗೆಯವರಿಗೆ ತಂದೆಯ ಹೆಸರಿನಿಂದ ಮಂತ್ರಿ ಸ್ಥಾನ ಲಭಿಸಿದೆಯೇ ಹೊರತು ಸ್ವಸಾಮರ್ಥ್ಯದಿಂದಲ್ಲ. ಸಂಘದ ಚಟುವಟಿಕೆಗಳೇನು? ಹಣ ಎಲ್ಲಿಂದ ಬರುತ್ತದೆ? ಎಂದೆಲ್ಲಾ ಕೇಳುವ ಅವರು ಸಂಘದ ಶಾಖೆಗೆ, ಉತ್ಸವಗಳಿಗೆ ಬರಲಿ. ಸ್ವಯಂಸೇವಕರು ತಾಯಿ ಭಾರತ ಮಾತೆಗೆ ತನು ಮನ ಧನವನ್ನು ಹೇಗೆ ಅರ್ಪಣೆ ಮಾಡುತ್ತಾರೆ ಎಂಬುದನ್ನು ಅರಿತುಕೊಳ್ಳಲಿ. 1962ರ ಚೀನಾ ಯುದ್ಧದ ಸಂದರ್ಭದಲ್ಲಿ ಸಂಘದ ಸ್ವಯಂಸೇವಕರ ಕಾರ್ಯವನ್ನು ನೆಹರೂರವರೇ ಶ್ಲಾಘಿಸಿದ್ದರು. ಸಂಘದ ಎರಡನೇ ಸರಸಂಘಚಾಲಕರಾಗಿದ್ದ ಗುರೂಜಿಯವರು ನಿಧನ ಹೊಂದಿದ್ದಾಗ ಇಂದಿರಾಗಾಂಧಿಯವರೇ ಲೋಕಸಭೆಯಲ್ಲಿ ಶ್ರದ್ಧಾಂಜಲಿ ಅರ್ಪಿಸಿದ್ದರು ಎಂಬ ಇತಿಹಾಸವನ್ನು ಅವರು ಅರಿಯಲಿ ಎಂದರು. ದೇಶದ ಯಾವುದೇ ಮೂಲೆಯಲ್ಲಿ ಭೂಕಂಪ, ನೆರೆ, ಸುನಾಮಿ ಹೀಗೆ ಯಾವುದೇ ಅವಘಡದ ಸಂದರ್ಭದಲ್ಲಿ ಸ್ವಯಂಸೇವಕರು ಅಲ್ಲಿ ಕಾರ್ಯನಿರತರಾಗಿರುತ್ತಾರೆ. ಕಳೆದ ನೂರು ವರ್ಷಗಳಲ್ಲಿ ಆರ್.ಎಸ್.ಎಸ್ ನಡೆಸಿದ ಸೇವಾ ಚಟುವಟಿಕೆಗಳನ್ನು ಕಾಂಗ್ರೆಸ್ ಮಾಡುವುದು ಬಿಡಿ, ಕನಸಿನಲ್ಲಿಯೂ ಅದರ ಹತ್ತಿರ ಸುಳಿಯಲು ಸಾಧ್ಯವಿಲ್ಲ. ಇಂತಹ ಸಂಘದ ಟೋಪಿ ಬಗ್ಗೆ ಅವಹೇಳನಕಾರಿಯಾಗಿ ಮಾತನಾಡುವ ಡಿಕೆಶಿಯವರಿಗೆ ಮುಸ್ಲಿಮರ ಟೋಪಿ ಬಗ್ಗೆ ಮಾತನಾಡುವ ಧೈರ್ಯ ಇದೆಯಾ? ನಾನೂ ಕೂಡ ಗಣವೇಶ ಹಾಕಿ ಪಥ ಸಂಚಲನದಲ್ಲಿ ಭಾಗವಹಿಸಿದ್ದೇನೆ. ಮುಂದೆಯೂ ಭಾಗವಹಿಸುತ್ತೇನೆ. ತಾಕತ್ತಿದ್ದವರು ತಡೆಯಿರಿ ಎಂದು ಶಾಸಕ ಕಾಮತ್ ರವರು ಸವಾಲು ಹಾಕಿದರು.

# ರಾಷ್ಟ್ರೀಯ ಈಜು ಕೂಟ: ಆನಂದ ಅಮೀನ್‌ಗೆ 4 ಚಿನ್ನ



ಮಂಗಳೂರು: ಆಂಧ್ರಪ್ರದೇಶದ ಗುಂಟೂರು ಜಿಲ್ಲೆಯ ಮಂಗಲಗಿರಿಯ ಒಲಿಂಪಿಯನ್ ಮೆಹಬೂಬ್ ಷಂಷೇರ್ ಖಾನ್ ಈಜುಕೊಳದಲ್ಲಿ ನಡೆದ ರಾಷ್ಟ್ರೀಯ ಈಜು ಕೂಟದಲ್ಲಿ ಆನಂದ ಅಮೀನ್ ಬೆಂಗ್ರೆ ನಾಲ್ಕು ಚಿನ್ನದ ಪದಕ ಗೆದ್ದುಕೊಂಡಿದ್ದಾರೆ. ಮಾಸ್ಟರ್ಸ್ ಅಕ್ವೆಟಿಕ್ ಫೆಡರೇಶನ್ ಅ.11ಮತ್ತು 12 ರಂದು ವಯೋವಿಭಾಗಗಳಲ್ಲಿ ಹಿರಿಯರ ರಾಷ್ಟ್ರೀಯ ಈಜು ಕೂಟ ಆಯೋಜಿಸಿತ್ತು. ಉತ್ತಮ ಕುಸ್ತಿಪಟು ಆಗಿರುವ ಆನಂದ ಅಮೀನ್ ಅವರು 50ಮೀಟರ್, 25ಮೀಟರ್ ಫ್ರೀ ಸ್ಟೈಲ್ 50 ಮತ್ತು 25ಮೀಟರ್ ಬ್ರೆಸ್ಟ್ ಸ್ಟ್ರೋಕ್ ವಿಭಾಗದಲ್ಲಿ ಚಿನ್ನದ ಪದಕಗಳನ್ನು ಗೆದ್ದುಕೊಂಡು ಅಂತರಾಷ್ಟ್ರೀಯ ಮಾಸ್ಟರ್ಸ್ ಈಜು ಕೂಟಕ್ಕೆ ಅರ್ಹತೆಯನ್ನು ಪಡೆದುಕೊಂಡಿದ್ದಾರೆ. ಇವರು ನಿವೃತ್ತ ಬ್ಯಾಂಕ್ ಉದ್ಯೋಗಿಯಾಗಿದ್ದು, ಮೂಲತ: ಬೆಂಗ್ರೆ ನಿವಾಸಿಯಾಗಿದ್ದಾರೆ.

# 'ಕಾಂತಾರ'ದಿಂದ ದೈವಗಳಿಗೆ ಅಪಚಾರ ನಡೆದಿಲ್ಲ : ಐಕಳ ಹರೀಶ್ ಶೆಟ್ಟಿ



ಮಂಗಳೂರು: ಹೊಂಬಾಳೆ ಫಿಲಂಸ್ ಲಾಂಛನದಲ್ಲಿ ತಯಾರಾದ ರಿಷಬ್ ಶೆಟ್ಟಿ ನಿರ್ದೇಶನದ "ಕಾಂತಾರ" ಸಿನಿಮಾದ ಬಗ್ಗೆ ಪರ ವಿರೋಧ ಚರ್ಚೆಯಾಗುತ್ತಿದ್ದು, ಸಿನಿಮಾದಲ್ಲಿ ಎಲ್ಲೂ ದೈವಗಳಿಗೆ ಅಪಚಾರ ಆಗಿಲ್ಲ. ಸಿನಿಮಾವನ್ನು ಸಿನಿಮಾದ ರೀತಿಯಲ್ಲೇ ನೋಡಿದರೆ ಚೆಂದ. ಸಿನಿಮಾದ ಉದ್ದಕ್ಕೂ ಎಲ್ಲೂ ದೈವಗಳ ನಿಂದನೆಯಾಗಿಲ್ಲ ಎಂದು ಜಾಗತಿಕ ಬಂಟರ ಸಂಘಗಳ ಒಕ್ಕೂಟದ ಅಧ್ಯಕ್ಷ ಐಕಳ ಹರೀಶ್ ಶೆಟ್ಟಿ ತಿಳಿಸಿದ್ದಾರೆ. ಕಾಂತಾರ ಸಿನಿಮಾ ಇಂದು ವಿಶ್ವದೆಲ್ಲೆಡೆ ಬಿಡುಗಡೆಯಾಗಿ ಸಂಚಲನವನ್ನೇ ಸೃಷ್ಟಿ ಮಾಡಿದೆ. ಇದರ ಬೆನ್ನಲ್ಲೇ ಸಿನಿಮಾದ ಕುರಿತು ಅಪಸ್ವರ ಎದ್ದಿದೆ, ಪರ ವಿರೋಧ ಚರ್ಚೆಗಳು ನಡೆದಿದೆ. ದೈವ ನಂಬಿದವರ ಸ್ವತ್ತು. ದೈವ ಒಂದು ಜಾತಿಗೆ ಸೀಮಿತವಾದ ಸ್ವತ್ತಲ್ಲ. ಜಾತಿಮತಕ್ಕೆ ಮೀರಿದ ಸ್ವತ್ತು. ಕಾಂತಾರದಿಂದ ದೈವಭಕ್ತಿ ಹೆಚ್ಚಿದೆ. ಈ ಸಿನಿಮಾವನ್ನು ನಿರ್ದೇಶಿಸಿ ಪಾತ್ರ ನಿರ್ವಹಿಸಿರುವ ರಿಷಬ್ ಶೆಟ್ಟಿ ಇಂದು ಅಂತರಾಷ್ಟ್ರೀಯ ಮಟ್ಟದಲ್ಲಿ ಗುರುತಿಸಿಕೊಂಡಿದ್ದಾರೆ. ಈ ನೆಲದ ಭಾಷೆಯ ಕಂಪನ್ನು ರಾಷ್ಟದೆಲ್ಲೆಡೆ ಪಸರಿಸಿದ್ದಾರೆ. ಸಿನಿಮಾದಿಂದ ದೈವಗಳ ಅವಹೇಳನ ಆಗಿಲ್ಲ. ಸಿನಿಮಾವನ್ನು ಸಿನಿಮಾದ ರೀತಿಯಲ್ಲೇ ನೋಡಿ ಎಂದು ಐಕಳ ಹರೀಶ್ ಶೆಟ್ಟಿ ತಿಳಿಸಿದ್ದಾರೆ.

# ಕಾಂಗ್ರೆಸ್ ನಾಯಕರಿಂದ ರಾಷ್ಟಭಕ್ತರಿಗೆ ಅವಮಾನ : ನಂದನ್ ಮಲ್ಯ




ಮಂಗಳೂರು : ಈ ಮಾತೃಭೂಮಿಗೆ ನಮನ ಸಲ್ಲಿಸುತ್ತಾ, ದೇಶದ ಸಂಕಷ್ಟದ ಸಂದರ್ಭಗಳಲ್ಲಿ ಜನಸೇವೆಗೆ ಸದಾ ನಿಂತಿರುವ ಸಂಘಟನೆ ರಾಷ್ಟ್ರೀಯ ಸ್ವಯಂ ಸೇವಕ ಸಂಘ (RSS). ಆದರೆ ಇತ್ತೀಚಿನ ದಿನಗಳಲ್ಲಿ ಕಾಂಗ್ರೆಸ್ ನಾಯಕರು ಈ ರಾಷ್ಟಭಕ್ತ ಸಂಘಟನೆಯ ವಿರುದ್ಧ ವಿಷ ಉಗುಳುತ್ತಿರುವುದು ಅತ್ಯಂತ ಖೇದಕರ. ಕಳೆದ ದಿನಗಳಲ್ಲಿ ಡಿಸಿಎಂ ಡಿಕೆ ಶಿವಕುಮಾರ್ ಅವರು ಸಾರ್ವಜನಿಕವಾಗಿ ಬಿಜೆಪಿ ಶಾಸಕರಿಗೆ ಅವಮಾನ ಮಾಡುವುದರ ಜೊತೆಗೆ, "ಕಪ್ಪು ಟೋಪಿ" ಎಂದು ಹೀಯಾಳಿಸುವ ಮೂಲಕ RSS ಸಂಘಟನೆಯನ್ನೂ ನಿಂದಿಸಿದ್ದಾರೆ. ಈ ರೀತಿಯ ಹೇಳಿಕೆಗಳು ಕೇವಲ ಸಂಘಟನೆಯನ್ನಲ್ಲ, ಭಾರತೀಯ ಸಂಸ್ಕೃತಿ, ರಾಷ್ಟಭಕ್ತಿ ಮತ್ತು ಸಮಾಜಸೇವೆಯ ಮೂಲ ತತ್ವಗಳನ್ನೇ ಅವಮಾನಿಸುವಂತಿವೆ. ಡಿಕೆ ಶಿವಕುಮಾರ್ ಅವರು ಕರಿ ಟೋಪಿಯನ್ನ ದ್ವೇಷಿಸಿದರೆ ಅವರ ರಾಜಕೀಯ ಬೆಳವಣಿಗೆ ಆಗುವುದು ಎಂಬ ಬ್ರಹ್ಮೆಯಲ್ಲಿ ಇದ್ದಾರೆ. ಸಿದ್ದರಾಮಯ್ಯ ಅವರ ನಕಲು ಮಾಡಿದರೆ ಸಿಎಂ ಪಟ್ಟ ಖಚಿತವಾಗುವುದಿಲ್ಲ. ಪ್ರಿಯಾಂಕ್ ಖರ್ಗೆ ಅವರು, RSS ವಿರುದ್ಧದ ಅವರ ಮಾತುಗಳಿಂದ ಹುದ್ದೆ ದೊರೆಯುತ್ತದೆ ಅನ್ನೋ ಭ್ರಮೆ ಮೂರ್ಖತನ. ಅವರ ತಂದೆಯವರ ಅನುಭವವೇ ಇದಕ್ಕೆ ಸಾಕ್ಷಿ. ರಾಷ್ಟ್ರೀಯವಾದಿಗಳನ್ನು, ದೇಶಭಕ್ತರನ್ನು ಹೀಯಾಳಿಸುವ ಕಾಂಗ್ರೆಸ್‌ನ ಧೋರಣೆಗಳು ಶಾಶ್ವತವಾಗಲಾರವು. ರಾಷ್ಟಪ್ರೇಮಿಗಳು, ದೇಶದ ಪ್ರಜೆಗಳು ಮತ್ತು ನಿಜವಾದ ಭಾರತೀಯರು ಇಂತಹ ದ್ವೇಷಪೂರ್ಣ ರಾಜಕೀಯಕ್ಕೆ ಶೀಘ್ರದಲ್ಲೇ ತಕ್ಕ ಪಾಠ ಕಲಿಸುವರು ಎಂದು ಬಿಜೆಪಿ ಯುವ ಮೋರ್ಚಾ ದಕ್ಷಿಣ ಕನ್ನಡ ಜಿಲ್ಲಾಧ್ಯಕ್ಷ ನಂದನ್ ಮಲ್ಯ ಉಲ್ಲಾಳ್ ತಮ್ಮ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಇಂದ್ರಾಳಿ ರೈಲ್ವೆ ನಿಲ್ದಾಣದಲ್ಲಿ ಡಿಜಿಟಲ್ ಲಾಕರ್ ಸೌಲಭ್ಯ




ಉಡುಪಿ: ರಾಜ್ಯದಲ್ಲೇ ಮೊದಲನೇಯದಾಗಿ ಉಡುಪಿಯ ಇಂದ್ರಾಳಿ ರೈಲ್ವೆ ನಿಲ್ದಾಣದಲ್ಲಿ ಡಿಜಿಟಲ್ ಲಾಕರ್ ಸೌಲಭ್ಯ ವನ್ನು ಕೊಂಕಣ ರೈಲ್ವೆಯ ಪ್ರಯಾಣಿಕರಿಗೆ ಒದಗಿಸಲಾಗಿದೆ ಎಂದು ಕೊಂಕಣ ರೈಲ್ವೆಯ ಪ್ರಕಟಣೆ ತಿಳಿಸಿದೆ. ಆಧುನಿಕ ತಂತ್ರಜ್ಞಾನದೊಂದಿಗೆ ಉಡುಪಿ ರೈಲ್ವೆ ನಿಲ್ದಾಣದಲ್ಲಿ ಒಟ್ಟು 15 ಲಾಕರ್‌ಗಳನ್ನು ಒದಗಿಸಲಾಗಿದೆ. ರೈಲ್ವೆ ಪ್ರಯಾಣಿಕರು ಉಡುಪಿಯಲ್ಲಿ ಇಳಿದು ನಿರ್ದಿಷ್ಟ ವೇಳಾವಧಿಗೆ ಗೊತ್ತುಪಡಿಸಿದ ಶುಲ್ಕ ಪಾವತಿಸಿ ತಮ್ಮೆಲ್ಲಾ ಲಗ್ಗೇಜ್ ಗಳನ್ನು ಸುರಕ್ಷಿತವಾಗಿ ಡಿಜಿಟಲ್ ಲಾಕರ್ ವ್ಯವಸ್ಥೆಯಲ್ಲಿ ಇರಿಸಿ, ತಮ್ಮ ಕೆಲಸ ಮುಗಿಸಿಕೊಂಡು ಬಂದು ಅದನ್ನು ಕೊಂಡೊಯ್ಯಬಹುದು. ಲಾಕರ್ ಶುಲ್ಕ: ಕೊಂಕಣ ರೈಲ್ವೆ ನಿರ್ಧರಿಸಿದಂತೆ ಸದ್ಯ ಸಣ್ಣ ಗಾತ್ರದ ಲಗ್ಗೇಜ್‌ಗೆ ಮೂರು ಗಂಟೆ ಅವಧಿಗೆ 15ರೂ, ಆರು ಗಂಟೆಗಳ ಅವಧಿಗೆ 30, 12 ಗಂಟೆಗಳ ಅವಧಿಗೆ 45 ಹಾಗೂ 24 ಗಂಟೆಗಳ ಅವಧಿಗೆ 60 ರೂ.ಆಗಿರುತ್ತದೆ. ಮಧ್ಯಮ ಗಾತ್ರದ ಲಗ್ಗೇಜ್‌ಗೆ 3ಗಂಟೆಗೆ-20ರೂ, 6ಗಂಟೆಗೆ-40, 12ಗಂಟೆಗೆ-60 ಹಾಗೂ 24 ಗಂಟೆಗೆ 80ರೂ. ದೊಡ್ಡ ಗಾತ್ರದ ಲಗ್ಗೇಜ್‌ಗೆ 3ಗಂಟೆಗೆ -40, 6ಗಂಟೆಗೆ- 60, 12ಗಂಟೆಗೆ- 90 ಹಾಗೂ 24 ಗಂಟೆಗೆ - 120 ರೂ. ಅತಿದೊಡ್ಡ ಗಾತ್ರದ ಲಗ್ಗೇಜ್‌ಗೆ 3ಗಂಟೆಗೆ- 60, 6ಗಂಟೆಗೆ -120, 12ಗಂಟೆಗೆ-180 ಹಾಗೂ 24 ಗಂಟೆಗೆ-240 ರೂ.ಗಳನ್ನು ನಿಗದಿ ಪಡಿಸಲಾಗಿದೆ.

# ಪುತ್ತೂರಿನ ಗ್ರಾಮ ಪಂಚಾಯತಿಗಳಿಗೆ ಕಿಶೋರ್ ಕುಮಾರ್ ಭೇಟಿ




ಮಂಗಳೂರು: ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರು ತಾಲೂಕಿನ ಬಜತ್ತೂರು ಮತ್ತು ಬನ್ನೂರು ಗ್ರಾಮ ಪಂಚಾಯತಿಗಳಿಗೆ ದಕ್ಷಿಣ ಕನ್ನಡ ಮತ್ತು ಉಡುಪಿ ಸ್ಥಳೀಯ ಸಂಸ್ಥೆಯ ಚುನಾಯಿತ ವಿಧಾನ ಪರಿಷತ್ ಸದಸ್ಯರಾದ ಶ್ರೀ ಕಿಶೋರ್ ಕುಮಾರ್ ಪುತ್ತೂರು ಭೇಟಿ ನೀಡಿ ಗ್ರಾಮ ಪಂಚಾಯತ್ ಆಡಳಿತ ಮಂಡಳಿ ಮತ್ತು ಅಧಿಕಾರಿಗಳೊಂದಿಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರದ ವಿವಿಧ ಯೋಜನೆಗಳ ಅನುಷ್ಠಾನ ಮತ್ತು ಪ್ರಗತಿ ಕುರಿತು ಪರಿಶೀಲನೆ ನಡೆಸಿದರು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಭೇಟಿಯ ವೇಳೆ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ (ಒಉಓಖಇಉಂ), ಪ್ರಧಾನ ಮಂತ್ರಿ ಆವಾಸ್ ಯೋಜನೆ, 15ನೇ ಹಣಕಾಸು ಅನುದಾನ, ಸ್ವಚ್ಛ ಭಾರತ ಮಿಷನ್ (SBM), ಜಲಜೀವನ್ ಮಿಷನ್ (ಎಎಒ) ಸೇರಿದಂತೆ ವಿವಿಧ ಯೋಜನೆಗಳ ಪ್ರಗತಿಯನ್ನು ವಿಶ್ಲೇಷಿಸಲಾಯಿತು. ಅದೇ ರೀತಿ ನಮೂನೆ 9, 11A, 11B ಪ್ರಮಾಣ ಪತ್ರ ವಿತರಣೆ, ಕಟ್ಟಡ ತೆರಿಗೆ ಸಂಗ್ರಹಣೆ, ವಾರ್ಡ್ ಮತ್ತು ಗ್ರಾಮ ಸಭೆ ಆಯೋಜನೆ, ಸ್ವಾಧೀನ ಪ್ರಮಾಣ ಪತ್ರ ನೀಡುವ ವಿಧಾನಗಳು, ಗ್ರಾಮ ಅಭಿವೃದ್ಧಿ ಅಡಚಣೆಗಳು ಮುಂತಾದ ವಿಷಯಗಳ ಕುರಿತು ಚರ್ಚಿಸಲಾಯಿತು. ಬಜತ್ತೂರು ಪಂಚಾಯತಿ MGNREGA ಮತ್ತು ಜಲಜೀವನ್ ಮಿಷನ್ ಯೋಜನೆಗಳ ಅನುಷ್ಠಾನದಲ್ಲಿ ಉತ್ತಮ ಪಾರದರ್ಶಕತೆ ಮತ್ತು ಪ್ರಗತಿಯನ್ನು ಸಾಧಿಸಿದೆ ಎಂದು ಶಾಸಕರು ಪ್ರಶಂಸಿಸಿದರು. ಗ್ರಾಮದ ಎಲ್ಲಾ ಮನೆಗಳಿಂದ ಒಣಕಸದ ಸಂಗ್ರಹಣೆ ಮತ್ತು ವಿಲೇವಾರಿ ಕ್ರಮವನ್ನು ಬಲಪಡಿಸಿ SBM ಯೋಜನೆ ಯಶಸ್ವಿಗೊಳಿಸಲು ಸೂಚಿಸಲಾಯಿತು.

# ದ.ಕ. ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಚುನಾವಣೆ




ಮಂಗಳೂರು: ದಕ್ಷಿಣ ಕನ್ನಡ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ 2025-28ನೆ ಅವಧಿಯ ಆಡಳಿತ ಮಂಡಳಿ ಚುನಾವಣೆಗೆ ಅಧಿಸೂಚನೆ ಪ್ರಕಟಗೊಂಡಿದೆ. ಅಕ್ಟೋಬರ್ 19ರಿಂದ ನಾಮಪತ್ರ ಸಲ್ಲಿಕೆ ಆರಂಭವಾಗಲಿದ್ದು, (ಬೆಳಿಗ್ಗೆ 11ರಿಂದ ಮಧ್ಯಾಹ್ನ 3 ರವರೆಗೆ) ನಾಮಪತ್ರ ಸಲ್ಲಿಸಲು ಅಕ್ಟೋಬರ್ 27 ಕೊನೆಯ ದಿನ. ಅಕ್ಟೋಬರ್ 28ರಂದು ನಾಮಪತ್ರಗಳ ಪರಿಶೀಲನೆ, ಅ. 30ರಂದು ನಾಮಪತ್ರಗಳನ್ನು ಹಿಂತೆಗೆದುಕೊಳ್ಳುವ ಕೊನೆಯ ದಿನವಾಗಿರುತ್ತದೆ. ನವೆಂಬರ್ 9ರಂದು ಬೆಳಿಗ್ಗೆ 9ರಿಂದ ಮಧ್ಯಾಹ್ನ 3ಗಂಟೆವರೆಗೆ ವಾರ್ತಾ ಭವನದಲ್ಲಿ ಮತದಾನ ನಡೆಯಲಿದೆ. ಬಳಿಕ ಮತ ಎಣಿಕೆ ನಡೆದು ಫಲಿತಾಂಶ ಪ್ರಕಟವಾಗಲಿದೆ. ಮತದಾರರ ಪಟ್ಟಿಯನ್ನು ವಾರ್ತಾಭವನದಲ್ಲಿ ಪ್ರಕಟಿಸಲಾಗಿದೆ ಎಂದು ದಕ್ಷಿಣ ಕನ್ನಡ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಚುನಾವಣಾಧಿಕಾರಿ, ವಾರ್ತಾಧಿಕಾರಿ ಬಿ.ಎ ಖಾದರ್ ಶಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಂಗಳೂರಿನಲ್ಲಿ ಖಾದಿ ಉತ್ಪಾದನಾ ಕೇಂದ್ರಕ್ಕೆ ಕ್ರಮ : ಶಾಸಕ ಕಾಮತ್




ಮಂಗಳೂರು: ಎರಡು ಖಾದಿ ಉತ್ಪಾದನಾ ಕೇಂದ್ರಗಳನ್ನು ಮಂಗಳೂರಿನಲ್ಲಿಯೂ ಆರಂಭಿಸಲು ಕ್ರಮ ವಹಿಸಲಾಗುವುದು ಎಂದು ಮಂಗಳೂರು ದಕ್ಷಿಣ ವಿಧಾನಸಭಾ ಕ್ಷೇತ್ರದ ಶಾಸಕ ಡಿ.ವೇದವ್ಯಾಸ ಕಾಮತ್ ಹೇಳಿದ್ದಾರೆ. ನಗರದ ದಿ ಭಾರತ್ ಸ್ಕೌಟ್ಸ್ ಆಂಡ್ ಗೈಡ್ಸ್ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ರಾಜ್ಯ ಮಟ್ಟದ ಖಾದಿ ಮತ್ತು ಗ್ರಾಮೋದ್ಯೋಗ ವಸ್ತು ಪ್ರದರ್ಶನ ಹಾಗೂ ಮಾರಾಟ 'ಖಾದಿ ಉತ್ಸವ-2025'ನ್ನು ಉದ್ಘಾಟಿಸಿ ಮಾತನಾಡಿದರು. ಮಂಡಳಿಯ ಅಧ್ಯಕ್ಷ, ಶಾಸಕ ಬಸನಗೌಡ ತುರುವಿಹಾಳ ಅವರು ಮಾತನಾಡಿ, ಖಾದಿ ಕೇಂದ್ರ ಸ್ಥಾಪನೆಗೆ ಪಿಎಂಇಜಿಪಿ ಯೋಜನೆಯಡಿ ಸಹಾಯಧನದೊಂದಿಗೆ ಸಾಲ ಸೌಲಭ್ಯ ರಾಜ್ಯ ಸರಕಾರದಿಂದ ನೆರವು ಒದಗಿಸಲಾಗುತ್ತದೆ ಎಂದು ತಿಳಿಸಿದರು. ದ.ಕ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯ ಸಂಯುಕ್ತ ಆಶ್ರಯದಲ್ಲಿ ನಡೆಯುತ್ತಿರುವ ಖಾದಿ ಉತ್ಸವದಲ್ಲಿ 42 ಖಾದಿ ಸಂಘಗಳು ಹಾಗೂ 24 ಗ್ರಾಮೀಣ ಕೈಗಾರಿಕೆಗಳ ಕಸುಬುದಾರರು ರಾಜ್ಯದ ವಿವಿಧ ಜಿಲ್ಲೆಗಳಿಂದ ಹಾಗೂ ಹೊರ ರಾಜ್ಯಗಳಿಂದ ಭಾಗವಹಿಸಿದ್ದಾರೆ. 66 ಮಳಿಗೆಗಳನ್ನು ತೆರೆಯಲಾಗಿದೆ. ಉತ್ಸವ ಅ.24ರವರೆಗೆ ಇರಲಿದ್ದು, ಪ್ರದರ್ಶನದಲ್ಲಿ ಸಂಘ ಸಂಸ್ಥೆಗಳು ಉತ್ಪಾದಿಸಿರುವ ಅರಳೆ ಖಾದಿ, ರೇಷ್ಮೆ ಖಾದಿ, ಉಣ್ಣೆ ಬಟ್ಟೆಗಳು, ಶರ್ಟ್‌ಗಳು, ಕುರ್ತಗಳು, ಕಸೂತಿ ಬಟ್ಟೆಗಳು ಶೇ. 20ರಿಂದ ಶೇ.35ರವರೆಗೆ ರಿಯಾಯಿತಿ ದರದಲ್ಲಿ ಗ್ರಾಹಕರಿಗೆ ಲಭ್ಯವಿವೆ.

# ಆಳ್ವಾಸ್‌ನಲ್ಲಿ ವಲಯ ಮಟ್ಟದ ವಾಲಿಬಾಲ್ ಪಂದ್ಯಾಟ ಉದ್ಘಾಟನೆ



ಮೂಡುಬಿದಿರೆ: ನನ್ನ ಇಂದಿನ ಎಲ್ಲಾ ಸಾಧನೆಗಳಿಗೆ ಆಳ್ವಾಸ್ ಕಾರಣ. ವಿದ್ಯಾರ್ಥಿ ಜೀವನದಲ್ಲಿ ಕ್ರೀಡೆಯ ಮೂಲಕ ಆಳ್ವಾಸ್ ನೀಡಿದ ಅವಕಾಶಗಳು ಮತ್ತು ಮಾರ್ಗದರ್ಶನದಿಂದ ನನ್ನ ಜೀವನದಲ್ಲಿ ಬದಲಾವಣೆ ಸಾಧ್ಯವಾಯಿತು ಎಂದು ಉಡುಪಿ ವಲಯದ ಫಾರೆಸ್ಟ್ ಬೀಟ್ ಆಫೀಸರ್ ಹಾಗೂ ಹಿರಿಯ ವಿದ್ಯಾರ್ಥಿ ಶರತ್ ಶೆಟ್ಟಿ ನುಡಿದರು. ಅವರು ಆಳ್ವಾಸ್ ಕಾಲೇಜ್ ಆಫ್ ಫಿಸಿಯೋತೆರೆಪಿ ಆಯೋಜಿಸಿದ್ದ ರಾಜೀವ್ ಗಾಂಧಿ ವಿಜ್ಞಾನ ವಿವಿಗಳ ಮಂಗಳೂರು ವಲಯ ಮಟ್ಟದ ಹುಡುಗರ ಮತ್ತು ಹುಡುಗಿಯರ ವಾಲಿಬಾಲ್ ಪಂದ್ಯಾಟವನ್ನು ಉದ್ಘಾಟಿಸಿ ಮಾತನಾಡಿದರು. ಆಳ್ವಾಸ್‌ನ ಶಿಸ್ತು, ಕಠಿಣ ಪರಿಶ್ರಮ ಮತ್ತು ಎಲ್ಲರಿಗೂ ಸನ್ಮಾನ ಅವಕಾಶ ನೀಡುವ ವ್ಯವಸ್ಥೆ ನನ್ನಂತಹ ಅನೇಕ ವಿದ್ಯಾರ್ಥಿಗಳನ್ನು ಯಶಸ್ಸಿನ ಹಾದಿಗೆ ಕೊಂಡೊಯ್ದಿದೆ. ಇಂದು ನಾನು ಸರಕಾರಿ ಉದ್ಯೋಗಿಯಾಗಿರುವುದು ಆಳ್ವಾಸ್‌ನಲ್ಲಿ ಕಲಿತ ನೈತಿಕತೆ, ಶ್ರಮ ಮತ್ತು ನಿಷ್ಠೆಯ ಫಲ. ಈ ಹಂತದಲ್ಲಿ ಸಿಗುವ ಅವಕಾಶಗಳನ್ನು ವಿದ್ಯಾರ್ಥಿಗಳು ಸಮರ್ಪಕವಾಗಿ ಉಪಯೋಗಿಸಿಕೊಳ್ಳಬೇಕು ಎಂದು ಅವರು ಸಲಹೆ ನೀಡಿದರು. ಆಳ್ವಾಸ್ ಶಿಕ್ಷಣ ಪ್ರತಿಷ್ಠಾನದ ಟ್ರಸ್ಟಿ ವಿವೇಕ್ ಆಳ್ವಾ ಮಾತನಾಡಿ, ಆಳ್ವಾಸ್‌ನಲ್ಲಿ ನಿಜವಾದ ಕಲಿಕೆ ಸಂಜೆ ಐದು ಗಂಟೆಯ ನಂತರ ಆರಂಭವಾಗುತ್ತದೆ. ದಿನನಿತ್ಯದ ತರಗತಿಗಳ ನಂತರ ನಡೆಯುವ ಚಟುವಟಿಕೆಗಳು ವಿದ್ಯಾರ್ಥಿಗಳಿಗೆ ಜೀವನ ಕೌಶಲ್ಯವನ್ನು ಕಲಿಸುತ್ತವೆ. ಇಂತಹ ಕಲಿಕೆಯಲ್ಲಿ ತೊಡಗಿಕೊಂಡವರ ಬದುಕು ಹಸನಾಗಿದೆ. ಇಂದಿನ ಮುಖ್ಯ ಅತಿಥಿಗಳು ಈ ನೆಲೆಯಲ್ಲಿ ಜೀವಂತ ನಿದರ್ಶನ ಎಂದು ಹೇಳಿದರು.

# ಅಮೃತಾನಂದಮಯಿ ಮಠದ ಸೇವೆ ಅನುಕರಣೀಯ-ವೇದವ್ಯಾಸ ಕಾಮತ್




ಮಂಗಳೂರು: ಸೇವೆಯನ್ನೇ ಪರಮ ಗುರಿಯನ್ನಾಗಿಸಿಕೊಂಡಿರುವ ಮಂಗಳೂರಿನ ಮಾತಾ ಅಮೃತಾನಂದಮಯಿ ಮಠವು ತನ್ನ ಸಮಾಜಮುಖಿ ಕಾರ್ಯಕ್ರಮದ ಅಂಗವಾಗಿ ಆರ್ಥಿಕವಾಗಿ ಹಿಂದುಳಿದವರಿಗೆ ಅನೇಕ ಉಚಿತ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿದ್ದು 400ಕ್ಕೂ ಅಧಿಕ ಮಕ್ಕಳ ಹೃದಯ ತಪಾಸಣೆ ಮಾಡಿ ಅಗತ್ಯವುಳ್ಳವರಿಗೆ ಸಂಪೂರ್ಣ ಉಚಿತವಾಗಿ ಹೃದಯ ಶಸ್ತ್ರ ಚಿಕಿತ್ಸೆ ಮಾಡುತ್ತಿರುವುದು ಹಾಗೂ ಇಲ್ಲಿ ವಿತರಣೆ ಮಾಡುತ್ತಿರುವ ವಸ್ತ್ರದಾನ ಮುಂತಾದವುಗಳು ಒಂದು ಮಾದರಿ ಉಪಕ್ರಮವಾಗಿದೆ ಎಂದು ಮಂಗಳೂರು ದಕ್ಷಿಣ ಶಾಸಕ ವೇದವ್ಯಾಸ ಕಾಮತ್ ಹೇಳಿದರು. ಮಾತಾ ಅಮೃತಾನಂದಮಯಿ ದೇವಿಯವರ 72ನೆಯ ಜನ್ಮದಿನಾಚರಣೆಯ ಪ್ರಯುಕ್ತ ಮಠದಲ್ಲಿ ಜರುಗಿದ ಸಮಾಜ ಸೇವಾ ಕಾರ್ಯಕ್ರಮದಲ್ಲಿ ಅವರು ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದರು. ಅದಕ್ಕೆ ಮುನ್ನ ಮಠದ ಮುಖ್ಯಸ್ಥರಾದ ಸಂಪೂಜ್ಯ ಸ್ವಾಮಿನಿ ಮಂಗಳಾಮೃತ ಪ್ರಾಣ ಅವರಿಂದ ಶ್ರೀ ಗುರು ಪಾದುಕಾ ಪೂಜೆ, ಭಜನೆ ಮತ್ತು ಧ್ಯಾನ ಕಾರ್ಯಕ್ರಮ ಶ್ರದ್ಧಾ ಭಕ್ತಿಗಳಿಂದ ನೆರವೇರಿತು. ಈ ಸಂದರ್ಭದಲ್ಲಿ ಅರ್ಹಫಲಾನುಭವಿ ಮಹಿಳೆಯರಿಗೆ ಸೀರೆಯನ್ನು ವಿತರಿಸಲಾಯಿತು.

# ಸುದ್ಧಿ ತುಣುಕು

ರಾಜ್ಯದಲ್ಲಿ ಸಾಗುತ್ತಿರುವ ಜಾತಿ ಸಾಮಾಜಿಕ ಆರ್ಥಿಕ ಸಮೀಕ್ಷೆಯಲ್ಲಿ ಭಾಗಿಯಾಗಲು ನಿರಾಕರಿಸಿದ ಮೂರ್ತಿ ದಂಪತಿಗಳು ಸ್ವಯಂ ದೃಢೀಕರಣ ಪತ್ರಕ್ಕೆ ಸಹಿ ಹಾಕಿದ್ದಾರೆ.

ಚಿತ್ರಮಂದಿರದ ಮುಂದೆ ದೈವದ ರೀತಿ ನಟನೆ ಮಾಡಬಾರದು. ನಾವು ಶ್ರದ್ಧೆ, ಭಕ್ತಿಯಿಂದ ಸಿನಿಮಾ ಮಾಡಿದ್ದೇವೆ. ನಮಗೆ ಬೇಜಾರು ಆಗುತ್ತದೆ ಯಾರು ಈ ರೀತಿ ಮಾಡಬಾರದು ಎಂದು ರಿಷಬ್ ಶೆಟ್ಟಿ ಮನವಿ ಮಾಡಿದರು.

RSS ಕಾರ್ಯಕ್ರಮಗಳಲ್ಲಿ ಸರ್ಕಾರಿ ನೌಕರರು ಪಾಲ್ಗೊಳ್ಳುವುದನ್ನು ನಿಷೇಧಿಸುವಂತೆ ಸಿಎಂ ಸಿದ್ದರಾಮಯ್ಯ ಅವರಿಗೆ ಪ್ರಿಯಾಂಕ್ ಖರ್ಗೆ ಪತ್ರದಲ್ಲಿ ಮನವಿ ಮಾಡಿದ್ದಾರೆ.

ರಾಜ್ಯೋತ್ಸವ ದಿನದಂದು ಧ್ವಜಾರೋಹಣ ಮಾಡಲು ಸಚಿವರ ನಿಯೋಜಿಸಿ ಸರ್ಕಾರ ಆದೇಶಿಸಿದೆ. ಜೊತೆಗೆ ಖಾಲಿಯಿದ್ದ ಮಾಹಿತಿ ಆಯುಕ್ತರ ನೇಮಕ ಮಾಡಿ ಆದೇಶ ಹೊರಡಿಸಿದೆ.

ಬೌದ್ಧ ಮಹಾ ಸಮ್ಮೇಳನ ಮತ್ತು ಮಾನವ ಮೈತ್ರಿಯ ಪಯಣ 2025 ಅಂತರಾಷ್ಟ್ರೀಯ ಬೌದ್ಧ ಸಾಂಸ್ಕೃತಿಕ ಸಂಗಮ ಕಾರ್ಯಕ್ರಮವನ್ನು ಸಿಎಂ ಸಿದ್ದರಾಮಯ್ಯ ಉದ್ಘಾಟಿಸಿದರು.

ಖ್ಯಾತ ಶಿಲ್ಪಿ ಅರುಣ್ ಯೋಗಿರಾಜ್ ಅವರು ಕೆತ್ತಿರುವ ಗಣಪತಿ ವಿಗ್ರಹವು ರಣಬೀರ್ ಕಪೂರ್ ಹಾಗೂ ಆಲಿಯಾ ಭಟ್ ಅವರ ಮನೆಯಲ್ಲಿ ಪ್ರತಿಷ್ಠಾಪನೆಯಾಗಲಿದೆ.

ನೈಋತ್ಯ ರೈಲ್ವೆಯು ದೀಪಾವಳಿ ಹಬ್ಬಕ್ಕೆ ವಿಶೇಷ ರೈಲುಗಳ ವ್ಯವಸ್ಥೆ ಮಾಡಿದೆ.

ಬಾಲಕಿಗೆ ಲೈಂಗಿಕ ಕಿರುಕುಳ ನೀಡಿರುವ ಆರೋಪದ ಮೇಲೆ ಇಬ್ಬರು ಆಟೋ ಚಾಲಕರನ್ನು ದಾವಣಗೆರೆ ಪೊಲೀಸರು ಬಂಧಿಸಿದ್ದಾರೆ.

ರಾಜ್ಯ ಸರ್ಕಾರಿ ನೌಕರರ ತುಟ್ಟಿಭತ್ಯೆಯನ್ನು ಶೇ.2ರಷ್ಟು ಹೆಚ್ಚಿಸಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ.

ರಾಜ್ಯ ಸರ್ಕಾರಿ ಸ್ವಾಮ್ಯದ ಮೈಸೂರು ಸೇಲ್ಸ್ ಇಂಟರ್ ನ್ಯಾಷನಲ್ ಲಿಮಿಟೆಡ್ (ಎಂಎಸ್ ಐಎಲ್) ವತಿಯಿಂದ ಸೂಪರ್ ಮಾರ್ಕೆಟ್ ಮಳಿಗೆ ಆರಂಭಿಸಲು ಚಿಂತನೆ ನಡೆಸಲಾಗಿದೆ ಎಂದು ಬೃಹತ್ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ ತಿಳಿಸಿದ್ದಾರೆ.

ಸರ್ಕಾರಿ ಸ್ಥಳಗಳಲ್ಲಿ ಆರ್.ಎಸ್.ಎಸ್ ಚಟುವಟಿಕೆಗಳನ್ನು ನಿಷೇಧಿಸಬೇಕು ಎಂದು ಪ್ರಿಯಾಂಕ್ ಖರ್ಗೆ ಹೇಳಿರುವುದರಲ್ಲಿ ತಪ್ಪೇನಿದೆ ಎಂದು ಸಿಎಂ ಸಿದ್ದರಾಮಯ್ಯ ಪ್ರಶ್ನಿಸಿದರು.

ಕಿರಣ್ ಮಜುಂದಾರ್ ಷಾ ಟ್ವೀಟ್ ಮಾಡುವ ಮೂಲಕ ಅವರಿಗೆ ನೆರವಾಗಿರುವ ದೇಶ ಹಾಗೂ ರಾಜ್ಯಕ್ಕೆ ಧಕ್ಕೆ ತರುತ್ತಿದ್ದಾರೆ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಹೇಳಿದರು.

ಅಖಿಲ ಭಾರತ ಸೇವೆಗಳಲ್ಲಿ ಹೆಚ್ಚುತ್ತಿರುವ ಮಹಿಳಾ ಶಕ್ತಿಗೆ ಸಾಕ್ಷಿ ಎಂಬಂತೆ, ಐಪಿಎಸ್ 77ನೇ ಬ್ಯಾಚ್‌ನಲ್ಲಿ ಲೇಡಿ ಆಫೀಸರ್‌ಗಳ ಸಂಖ್ಯೆಯಲ್ಲಿ ಹೊಸ ದಾಖಲೆ ಸೃಷ್ಟಿಯಾಗಿದೆ.

ಭಾರತ ರಷ್ಯಾದಿಂದ ತೈಲ ಖರೀದಿ ನಿಲ್ಲಿಸಲಿದೆ ಎಂಬ ಹೇಳಿಕೆ ಬೆನ್ನಲ್ಲೇ ವಿದೇಶಾಂಗ ಇಲಾಖೆ ಪ್ರಕಟಣೆ ಹೊರಡಿಸಿದ್ದು, ಭಾರತೀಯ ಗ್ರಾಹಕರ ಹಿತಾಸಕ್ತಿಗಳನ್ನು ಕಾಪಾಡುವುದು ನಮ್ಮ ಆದ್ಯತೆ ಎಂದಿದೆ.

ಮೋದಿ ಅವರು ಟ್ರಂಪ್ ಬಗ್ಗೆ ಭಯ ಹೊಂದಿದ್ದಾರೆ. ಭಾರತವು ರಷ್ಯಾದ ತೈಲವನ್ನು ಖರೀದಿಸುವುದಿಲ್ಲ ಎಂದು ನಿರ್ಧರಿಸಲು ಮತ್ತು ಘೋಷಿಸಲು ಟ್ರಂಪ್‌ಗೆ ಅವಕಾಶ ನೀಡುತ್ತಿದ್ದಾರೆ ಎಂದು ರಾಹುಲ್ ಗಾಂಧಿ ಟೀಕಿಸಿದ್ದಾರೆ.

ಕೀನ್ಯಾದ ಮಾಜಿ ಪ್ರಧಾನಮಂತ್ರಿ ರೈಲಾ ಒಡಿಂಗಾ ಅವರು ಹೃದಯಾಘಾತದಿಂದ ಕೇರಳದ ಎರ್ನಾಕುಲಂ ಜಿಲ್ಲೆಯ ಕೂಥಾಟುಕುಳಂನಲ್ಲಿ ನಿಧನರಾದರು. ಬೆಳಗ್ಗಿನ ನಡಿಗೆಯ ಸಂದರ್ಭದಲ್ಲಿ ಅವರಿಗೆ ಹೃದಯಾಘಾತವಾಗಿದೆ ಎಂದು ತಿಳಿದು ಬಂದಿದೆ.

ವಿಶಾಖಪಟ್ಟಣಂನಲ್ಲಿರುವ ಗೂಗಲ್ ಎಐ ಡೇಟಾ ಹಬ್ ಜಾಗತಿಕ ಸಂಪರ್ಕ ಕೇಂದ್ರವಾಗಿ ಹೊರಹೊಮ್ಮಲಿದ್ದು, ವಿವಿಧ ವಲಯಗಳ ಬೆಳವಣಿಗೆಗೆ ಹೊಸ ಮಾರ್ಗಗಳನ್ನು ತೆರೆಯಲಿದೆ.

# ಅವಲಕ್ಕಿ ಪಾಯಸ



**ಬೇಕಾಗುವ ಪದಾರ್ಥಗಳು :**
ಗಟ್ಟಿ ಅವಲಕ್ಕಿ – 1/2 ಕಪ್
ಕಪ್ ಸಕ್ಕರೆ – 1/2 ಕಪ್
ಹಾಲು – 2 ಕಪ್,
ತುಪ್ಪ – 1 ಚಮಚ,
ದ್ರಾಕ್ಷಿ – 7 – 8, ಗೊಡಂಬಿ
ಸ್ವಲ್ಪ ಏಲಕ್ಕಿ ಪುಡಿ


**ಮಾಡುವ ವಿಧಾನ :**
ಮೊದಲಿಗೆ ಗಟ್ಟಿ ಅವಲಕ್ಕಿಯನ್ನು ತೊಳೆದು ನೀರು ಬಗ್ಗಿಸಿ ಪಕ್ಕಕ್ಕಿಡಬೇಕು. ಈಗ ಒಂದು ಬಾಣಲೆಯಲ್ಲಿ ತುಪ್ಪ ಬಿಸಿಮಾಡಿ, ಗೋಡಂಬಿ ಮತ್ತು ದ್ರಾಕ್ಷಿ ಹುರಿದು ಎತ್ತಿಟ್ಟುಕೊಳ್ಳಬೇಕು. ನಂತರ ಅದೇ ಬಾಣಲೆಗೆ ಹಾಲು ಮತ್ತು ಸಕ್ಕರೆಯನ್ನು ಹಾಕಿ ಕುದಿಯಲು ಪ್ರಾರಂಭವಾದ ಕೂಡಲೇ ತೊಳೆದಿಟ್ಟ ಅವಲಕ್ಕಿ ಹಾಕಿ ಆಗಾಗ ಮಗುಚುತ್ತಾ ಕುದಿಸಬೇಕು. ಅವಲಕ್ಕಿ ಮೆತ್ತಗೆ ಬೇಯುವವರೆಗೆ ಮಧ್ಯಮ ಉರಿಯಲ್ಲಿ ಕುದಿಸಿ. ದ್ರಾಕ್ಷಿ, ಗೋಡಂಬಿ ಮತ್ತು ಏಲಕ್ಕಿ ಪುಡಿಯನ್ನು ಸೇರಿಸಿ. ಕೃಷ್ಣನಿಗೆ ಇಷ್ಟವಾದ ರುಚಿಕರವಾದ ಅವಲಕ್ಕಿ ಪಾಯಸ ಸವಿಯಲು ಸಿದ್ಧ.

# ಭಾರತದ ವಿರುದ್ಧ WTOಗೆ ದೂರು ಸಲ್ಲಿಸಿದ ಚೀನಾ!



ನವದೆಹಲಿ: ಎಲೆಕ್ಟ್ರಿಕ್ ವಾಹನಗಳು (ಇವಿಗಳು) ಮತ್ತು ಬ್ಯಾಟರಿಗಳ ಮೇಲಿನ ಸಬ್ಸಿಡಿಗಾಗಿ ಭಾರತದ ವಿರುದ್ಧ ವಿಶ್ವ ವ್ಯಾಪಾರ ಸಂಸ್ಥೆಯಲ್ಲಿ (WTO) ಚೀನಾ ದೂರು ದಾಖಲಿಸಿದೆ. ಚೀನಾ ಸಲ್ಲಿಸಿರುವ ದೂರಿನ ವಿವರಗಳನ್ನು ಸಚಿವಾಲಯವು ವಿಸ್ತೃತವಾಗಿ ಪರಿಶೀಲಿಸುತ್ತದೆ ಎಂದು ವಾಣಿಜ್ಯ ಕಾರ್ಯದರ್ಶಿ ರಾಜೇಶ್ ಅಗರವಾಲ್ ಹೇಳಿದ್ದಾರೆ. ಇದನ್ನು ದೃಢೀಕರಿಸಿದ ಅಧಿಕಾರಿಯೊಬ್ಬರು, ಟರ್ಕಿ, ಕೆನಡಾ ಮತ್ತು ಯುರೋಪಿಯನ್ ಒಕ್ಕೂಟ (EU) ವಿರುದ್ಧವೂ ಚೀನಾ ಇಂತಹುದೇ ದೂರು ಸಲ್ಲಿಸಿದೆ. ಅವರು ಭಾರತದೊಂದಿಗೆ ಸಮಾಲೋಚಿಸಲು ಬಯಸಿದ್ದಾರೆ ಎಂದು ತಿಳಿಸಿದ್ದಾರೆ.

# ಮತ್ತೊಂದು ಆಪರೇಷನ್ ಸಿಂಧೂರ್ ಸಹಿಸಿಕೊಳ್ಳುವ ಶಕ್ತಿ ನಮಗಿಲ್ಲ : ಪಾಕ್ ಸೇನೆ!



ನವದೆಹಲಿ : ಪಾಕಿಸ್ತಾನವು ಭಾರತದ ಮೇಲೆ ಮತ್ತೊಂದು ಪಹಲ್ಗಾಮ್ ಶೈಲಿಯ ದಾಳಿ ನಡೆಸಿದರೆ ಪರಿಸ್ಥಿತಿ ತುಂಬಾ ಗಂಭೀರವಾ ಗಲಿದೆ ಎಂದು ಭಾರತೀಯ ಸೇನೆ ಎಚ್ಚರಿಸಿದೆ. ಆಪರೇಷನ್ ಸಿಂದೂರ್ 2.0 ಹೆಚ್ಚು ಅಪಾ ಯಕಾರಿಯಾಗಲಿದೆ ಎಂದು ಪಾಕಿಸ್ತಾನಕ್ಕೆ ಎಚ್ಚ ರಿಕೆ ನೀಡಲಾಗಿದೆ ಎಂದು ಭಾರತದ ಪಶ್ಚಿಮ ಕಮಾಂಡ್'ನ ಜನರಲ್ ಆಫೀಸರ್ ಕಮಾಂ ಡಿಂಗ್-ಇನ್-ಚೀಫ್ (GOC-in-C) ಲೆಫ್ಟಿನೆಂಟ್ ಜನರಲ್ ಮನೋಜ್ ಕುಮಾರ್ ಕಟಿಯಾರ್ ಹೇಳಿದ್ದಾರೆ. ಇದರ ಬೆನ್ನಲ್ಲೇ ಮತ್ತೊಂದು ಆಪರೇಷನ್ ಸಿಂಧೂರ ಎದುರಿಸುವ ಶಕ್ತಿ ನಮಗಿಲ್ಲ ಎಂದು ಪಾಕಿಸ್ತಾನ ಸೇನೆ ಅದರ ಸರಕಾರವನ್ನು ಎಚ್ಚರಿಸಿದೆ.

# ಅಫ್ಘಾನಿಸ್ತಾನದ ಮೇಲೆ ಪಾಕಿಸ್ತಾನದಿಂದ ಏರ್‌ಸ್ಟ್ರೈಕ್



ಕಾಬುಲ್ : ಪಾಕಿಸ್ತಾನ ಅಫ್ಘಾನಿಸ್ತಾನದ ಸ್ಪಿನ್ ಬೋಲ್ಡಕ್ ನಗರದಲ್ಲಿ ವಾಯುದಾಳಿ ನಡೆಸಿದೆ. ಚಮನ್ ಗಡಿ ದಾಟುವಿಕೆಯ ಬಳಿ ವಾಯು ದಾಳಿಗಳು ನಡೆದಿವೆ. ಗಡಿಯಲ್ಲಿರುವ ಕನಿಷ್ಠ ಮೂರು ಅಫ್ಘಾನ್-ತಾಲಿಬಾನ್ ಪೋಸ್ಟ್‌ಗಳ ಮೇಲೆ ದಾಳಿ ನಡೆಸಲಾಗಿದೆ ಎಂದು ಸ್ಥಳೀಯ ಮೂಲಗಳು ತಿಳಿಸಿವೆ, ಅವರು ಡ್ರೋನ್‌ಗಳು ಮತ್ತು ವೈಮಾನಿಕ ದಾಳಿಗಳನ್ನು ನೋಡಿದ್ದಾರೆ. ಈ ದಾಳಿಯಲ್ಲಿ ಕನಿಷ್ಠ ನಾಲ್ವರು ಪಾಕಿಸ್ತಾನಿ ಭದ್ರತಾ ಅಧಿಕಾರಿಗಳು ಸಾವನ್ನಪ್ಪಿದ್ದು, ನಾಲ್ವರು ಗಾಯಗೊಂಡಿದ್ದಾರೆ. ಒಟ್ಟಾರೆಯಾಗಿ, ಸುಮಾರು 10 ನಾಗರಿಕರನ್ನು ಚಮನ್‌ನಲ್ಲಿರುವ ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ವರದಿಯಾಗಿದೆ.

# ಮಡಗಾಸ್ಕರ್‌ನಲ್ಲಿ ಹಿಂಸಾತ್ಮಕ Gen-Z ಪ್ರತಿಭಟನೆ



ಮಡಗಸ್ಕಾರ್ : ನೇಪಾಳದ ಬೆನ್ನಲ್ಲೇ ಆಫ್ರಿಕಾದ ಪೂರ್ವ ಕರಾವಳಿಯಲ್ಲಿರುವ ದ್ವೀಪ ರಾಷ್ಟ್ರವಾದ ಮಡಗಾಸ್ಕರ್ ಈಗ ಹಿಂಸಾತ್ಮಕ Gen-Z ಪ್ರತಿಭಟನೆಗಳಿಗೆ ಸಾಕ್ಷಿಯಾಗುತ್ತಿದೆ. ವರದಿಗಳ ಪ್ರಕಾರ, ವಿಶೇಷ ಮಿಲಿಟರಿ ಘಟಕವು ಸರ್ಕಾರದ ವಿರುದ್ಧ ಸ್ಥಾನಗಳನ್ನು ಪಡೆದುಕೊಂಡಿದೆ. ಈ ದಂಗೆಯನ್ನು ಸಂಭಾವ್ಯ ದಂಗೆ ಎಂದು ಪರಿಗಣಿಸಲಾಗುತ್ತಿದೆ, ಇದು ಮಡಗಾಸ್ಕರ್ ಅಧ್ಯಕ್ಷ ಆಂಡ್ರಿ ರಾಜೋಲಿನಾ ದೇಶವನ್ನು ಬಿಟ್ಟು ಪಲಾಯನ ಮಾಡಲು ಕಾರಣವಾಗುತ್ತದೆ. ಯುವ ಚಳುವಳಿ (Gen Z ಮಡಗಾಸ್ಕರ್) ನಡೆಸಿದ ಮೂರು ವಾರಗಳ ಪ್ರತಿಭಟನೆಯ ಈ ಬೆಳವಣಿಗೆ ಸಂಭವಿಸಿದೆ.

# ಭಾರತ ಮತ್ತು ಪ್ರಧಾನಿ ಮೋದಿಯನ್ನು ಹೊಗಳಿದ ಟ್ರಂಪ್ !



ಈಜಿಪ್ಟ್ : ಇಸ್ರೇಲ್-ಹಮಾಸ್ ಯುದ್ಧವನ್ನು ಕೊನೆಗೊಳಿಸಿದ ಗಾಜಾದಲ್ಲಿ ಕದನ ವಿರಾಮದ ನಂತರ ಈಜಿಪ್ಟ್ ನಗರದಲ್ಲಿ ವಿಶ್ವ ನಾಯಕರ ಶೃಂಗಸಭೆಯನ್ನುದ್ದೇಶಿಸಿ ಮಾತನಾಡಿದ ಟ್ರಂಪ್, 'ಭಾರತ ಮತ್ತು ಪಾಕಿಸ್ತಾನ ಒಟ್ಟಿಗೆ ಬಹಳ ಚೆನ್ನಾಗಿ ಬದುಕುತ್ತವೆ' ಎಂದು ಭಾವಿಸುವುದಾಗಿ ಹೇಳಿದ್ದಾರೆ. ಈಜಿಪ್ಟ್ ಆಯೋಜಿಸಿದ್ದ ಗಾಜಾ ಕುರಿತ ಶಾಂತಿ ಶೃಂಗಸಭೆಯಲ್ಲಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ದಕ್ಷಿಣ ಏಷ್ಯಾದ ಸಂಬಂಧಗಳ ಬಗ್ಗೆ ಆಶಾವಾದ ವ್ಯಕ್ತಪಡಿಸಿ, "ಪಾಕಿಸ್ತಾನ ಮತ್ತು ಭಾರತ ಬಹಳ ಚೆನ್ನಾಗಿ ಒಟ್ಟಿಗೆ ಬದುಕಲಿವೆ ಎಂದು ನಾನು ಭಾವಿಸುತ್ತೇನೆ" ಎಂದು ಪಾಕಿಸ್ತಾನದ ಪ್ರಧಾನಿ ಶೆಹಬಾಜ್ ಷರೀಫ್ ಅವರನ್ನು ದೃಢೀಕರಣಕ್ಕಾಗಿ ಕೇಳಿಕೊಂಡರು.

# ಇತಿಹಾಸ ಪುಟ ಸೇರಲಿದೆಯೇ ಪ್ಯಾರಿಸ್‌ನ ಜಗದ್ವಿಖ್ಯಾತ ಐಫಲ್ ಟವರ್ ?



ನವದೆಹಲಿ: ಪ್ಯಾರಿಸ್ ನಲ್ಲಿರುವ ಜಗದ್ವಿಖ್ಯಾತ ಐಫಲ್ ಟವರ್ ಶೀಘ್ರವೇ ಇತಿಹಾಸದ ಪುಟಗಳನ್ನು ಸೇರಲಿದೆ ಎಂಬ ಸುದ್ದಿ ವ್ಯಾಪಕವಾಗಿ ಪ್ರಚಾರವಾಗುತ್ತಿದೆ. ಕೆಲ ಮಾಧ್ಯಮ ವರದಿಗಳು ಪ್ಯಾರಿಸ್‌ನ ಐಫಲ್ ಟವರ್‌ನ್ನು 2026ರಲ್ಲಿ ಕೆಡವಲು ನಿರ್ಧರಿಸಲಾಗಿದೆ ಎಂಬ ವ್ಯಾಪಕ ಕಳವಳವನ್ನು ಹುಟ್ಟುಹಾಕಿವೆ. X ನಂತಹ ಪ್ಲಾಟ್‌ಫಾರ್ಮ್‌ಗಳಲ್ಲಿ ಪ್ರಕಟಗೊಂಡಿರುವ ಈ ಪೋಸ್ಟ್‌ಗಳು, "ಕಾರ್ಯಾಚರಣಾ ಗುತ್ತಿಗೆ" ಅವಧಿ ಮುಗಿಯುತ್ತಿದ್ದು, ರಚನೆಯಲ್ಲಿನ ಸಹಜ ದುರಸ್ತಿಗಳು, ದುಬಾರಿ ನಿರ್ವಹಣೆ ಮತ್ತು ಸಾರ್ವಜನಿಕ ದೂರುಗಳ ಕಾರಣದಿಂದಾಗಿ 2026ರಲ್ಲಿ ಐಫಲ್ ಟವರ್‌ನ್ನು ಕೆಡವಲಾಗುತ್ತದೆ ಎಂದು ಹೇಳುತ್ತಿವೆ.

# ಎಂದಿಗೂ ಮಾಡಿರದ ಸಾಧನೆ ಮಾಡಿದ ಯಶಸ್ವಿ ಜೈಸ್ವಾಲ್




ನವದೆಹಲಿ : ಭಾರತ ಮತ್ತು ವೆಸ್ಟ್ ಇಂಡೀಸ್ ನಡುವೆ ದೆಹಲಿಯಲ್ಲಿ ನಡೆಯುತ್ತಿರುವ ಟೆಸ್ಟ್ ಪಂದ್ಯದ ಮೊದಲ ದಿನದಂದು ಯಶಸ್ವಿ ಜೈಸ್ವಾಲ್ ಅವರ ಬ್ಯಾಟ್ ಅದ್ಭುತ ಪ್ರದರ್ಶನ ನೀಡಿತು. 173 ರನ್ ಗಳಿಸಿ ಅಜೇಯರಾಗಿ ಉಳಿದರು. ಈ ಇನ್ನಿಂಗ್ಸ್‌ನಲ್ಲಿ, ಯಶಸ್ವಿ ಹಲವಾರು ದಾಖಲೆಗಳನ್ನು ನಿರ್ಮಿಸಿದರು. ಕಳೆದ 93 ವರ್ಷಗಳ ಕ್ರಿಕೆಟ್ ಇತಿಹಾಸದಲ್ಲಿ ಎಂದಿಗೂ ಮಾಡಿರದ ಸಾಧನೆಯನ್ನು ಯಶಸ್ವಿ ಪೂರ್ಯೈಸಿದರು. ಯಶಸ್ವಿ ಟೆಸ್ಟ್‌ನಲ್ಲಿ 150+ ಗಳಿಸಿದ್ದು ಇದು ಐದನೇ ಬಾರಿ. ಇದರೊಂದಿಗೆ, 21ನೇ ಶತಮಾನದಲ್ಲಿ ಸ್ಟಾರ್ ಬ್ಯಾಟ್ಸ್‌ಮನ್ ವಿಶ್ವ ದಾಖಲೆಯನ್ನು ಸೃಷ್ಟಿಸಿದರು. ಈ ಶತಮಾನದಲ್ಲಿ 23 ಅಥವಾ ಅದಕ್ಕಿಂತ ಕಡಿಮೆ ವಯಸ್ಸಿನಲ್ಲಿ 150+ ರನ್‌ಗಳ ಐದು ಇನ್ನಿಂಗ್ಸ್‌ಗಳನ್ನು ಗಳಿಸಿದ ಮೊದಲ ಬ್ಯಾಟ್ಸ್‌ಮನ್ ಎಂಬ ಹೆಗ್ಗಳಿಕೆಗೆ ಪಾತ್ರರಾದರು.

# ವೆಸ್ಟ್ ಇಂಡೀಸ್ ವಿರುದ್ಧ ಗೆದ್ದು ಬೀಗಿದ ಭಾರತ



ನವದೆಹಲಿ : ವೆಸ್ಟ್ ಕ್ರಿಕೆಟ್‌ನಲ್ಲಿ ಟೀಮ್ ಇಂಡಿಯಾ ಹೊಸ ವಿಶ್ವ ದಾಖಲೆ ನಿರ್ಮಿಸಿದೆ. ಅದು ಕೂಡ ಸತತ ಸರಣಿ ಗೆಲುವುಗಳೊಂದಿಗೆ. ಅಂದರೆ ಟೆಸ್ಟ್ ಕ್ರಿಕೆಟ್ ಇತಿಹಾಸದಲ್ಲಿ ಒಂದೇ ತಂಡದ ವಿರುದ್ಧ ಸತತವಾಗಿ ಅತ್ಯಧಿಕ ಸರಣಿ ಗೆದ್ದ ವರ್ಲ್ಡ್ ರೆಕಾರ್ಡ್ ಪಟ್ಟಿಯಲ್ಲಿ ಭಾರತ ತಂಡವು ಅಗ್ರಸ್ಥಾನಕ್ಕೇರಿದೆ. ಟೀಮ್ ಇಂಡಿಯಾ ವೆಸ್ಟ್ ಇಂಡೀಸ್ ವಿರುದ್ಧ ಸತತ 10 ಟೆಸ್ಟ್ ಸರಣಿಗಳನ್ನು ಗೆದ್ದುಕೊಂಡಿದೆ. 2002 ರಿಂದ ಶುರುವಾದ ಈ ಟೆಸ್ಟ್ ಸರಣಿ ಗೆಲುವಿನ ನಾಗಾಲೋಟದೊಂದಿಗೆ ಭಾರತ ತಂಡವು ಸೌತ್ ಆಫ್ರಿಕಾ ತಂಡದ ಹೆಸರಿನಲ್ಲಿದ್ದ ವಿಶ್ವ ದಾಖಲೆಯನ್ನು ಸರಿಗಟ್ಟಿದೆ.

# ಆರ್‌ಟಿಐ ಕಾಯ್ದೆ ದುರುಪಯೋಗ ಅನುಮತಿಸಲಾಗದು-ಹೈಕೋರ್ಟ್



ಬೆಂಗಳೂರು : ಮಾಹಿತಿ ಹಕ್ಕು (ಆರ್‌ಟಿಐ) ಕಾಯ್ದೆಯ ದುರುಪಯೋಗಕ್ಕೆ ಅವಕಾಶ ನೀಡಲಾಗದು ಎಂದು ತೀಕ್ಷ್ಣವಾಗಿ ನುಡಿದಿರುವ ಹೈಕೋರ್ಟ್, ಆರ್‌ಟಿಐ ಕಾಯ್ದೆಯಡಿ ಮಾಹಿತಿ ಪಡೆಯದಂತೆ ವ್ಯಕ್ತಿಯೊಬ್ಬರನ್ನು ಕಪ್ಪುಪಟ್ಟಿಗೆ ಸೇರಿಸಿ ಕರ್ನಾಟಕ ರಾಜ್ಯ ಮಾಹಿತಿ ಆಯುಕ್ತರು ಹೊರಡಿಸಿದ್ದ ಆದೇಶಕ್ಕೆ ತಡೆ ನೀಡಲು ನಿರಾಕರಿಸಿದೆ. ರಾಜ್ಯ ಮಾಹಿತಿ ಆಯುಕ್ತರು 2025ರ ಜನವರಿ 28ರಂದು ಹೊರಡಿಸಿರುವ ಆದೇಶ ರದ್ದುಕೋರಿ ಆರ್‌ಟಿಐ ಕಾರ್ಯಕರ್ತ ಕೆ. ದೇವಪ್ರಸಾದ್ ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ಏಕಸದಸ್ಯ ನ್ಯಾಯಪೀಠ, ಮಾಹಿತಿ ಆಯುಕ್ತರ ಆದೇಶಕ್ಕೆ ತಡೆ ನೀಡಿ ಮಧ್ಯಂತರ ಆದೇಶ ಹೊರಡಿಸಲು ನಿರಾಕರಿಸಿತು.

# ನಾವು ರಸ್ತೆಗುಂಡಿ ಮುಚ್ಚಲು ಕಷ್ಟಪಡುತ್ತಿದ್ದೇವೆ : ಮೋಹನ್ ದಾಸ್ ಪೈ




ಬೆಂಗಳೂರು : ನಮ್ಮ ನೆರೆಯ ಆಂಧ್ರಪ್ರದೇಶ ಡೇಟಾ ಸೆಂಟರ್ ತೆರೆಯುತ್ತಿದೆ. ಆದರೆ ನಾವಿನ್ನೂ ರಸ್ತೆಗುಂಡಿ ಮುಚ್ಚಲು ಕಷ್ಟಪಡುತ್ತಿದ್ದೇವೆ ಎಂದು ಉದ್ಯಮಿ ಮೋಹನ್‌ದಾಸ್ ಪೈ ಸರ್ಕಾರಕ್ಕೆ ತಿವಿದಿದ್ದಾರೆ. ಬೆಂಗಳೂರಲ್ಲಿ ಗುಂಡಿಗಳೇ ತುಂಬಿದ ಕೆಟ್ಟ ರಸ್ತೆಯಿಂದ ಒದ್ದಾಡುತ್ತಿದ್ದೇವೆ. ಆದರೆ ನಮ್ಮ ನೆರೆಯ ಆಂಧ್ರಪ್ರದೇಶ ಗೂಗಲ್‌ನ 1,30,000 ಕೋಟಿ ವೆಚ್ಚದಲ್ಲಿ ಡೇಟಾ ಸೆಂಟರ್ ತೆರೆಯುತ್ತಿದೆ. ನಾವಿನ್ನೂ ರಸ್ತೆಗುಂಡಿ ಮುಚ್ಚಲು ಕಷ್ಟಪಡುತ್ತಿದ್ದೇವೆ ಸಾಮಾಜಿಕ ಜಾಲತಾಣದಲ್ಲಿ ಉದ್ಯಮಿ ಮೋಹನ್‌ದಾಸ್ ಪೈ ಪೋಸ್ಟ್ ಮಾಡಿದ್ದಾರೆ.

# ಮುಸ್ಲಿಮರೇ ಇಲ್ಲದ ಊರಿನಲ್ಲಿ ಅವರಿಗಾಗಿ ಸ್ಮಶಾನ : ಹಿಂದೂಗಳಿಗೆ?

ಮಂಡ್ಯ : ಮಂಡ್ಯ ಜಿಲ್ಲೆ ಹೊಸಬೂದನೂರು ಗ್ರಾಮದಲ್ಲಿ 60 ವರ್ಷದಿಂದ ಇದ್ದ ಸರ್ಕಾರಿ ಸ್ಮಶಾನವಾಗಿದ್ದ ಜಾಗ 2017ರಲ್ಲಿ ಮುಸ್ಲಿಮರಿಗೆ ಬಿಟ್ಟುಕೊಡಲಾಗಿದೆ. ಮುಸ್ಲಿಮರೇ ಇಲ್ಲದ ಊರಿನಲ್ಲಿ ಅವರಿಗಾಗಿ ಜಾಗ ಬಿಟ್ಟುಕೊಟ್ಟ ಬಗ್ಗೆ ಈಗ ಸಾಕಷ್ಟು ವಿರೋಧಕ್ಕೆ ಕಾರಣವಾಗಿದೆ. ಜಿಲ್ಲಾಡಳಿತದ ಈ ನಿರ್ಧಾವನ್ನು ವಿರೋಧಿಸಿ ಮಂಡ್ಯದ ಜನರು ಪ್ರತಿಭಟನೆಗಿಳಿದಿದ್ದಾರೆ. ಮಂಡ್ಯ ಜಿಲ್ಲೆಯ ತಾಲೂಕಿನ ಹೊಸಬೂದನೂರು ಗ್ರಾಮದಲ್ಲಿ ನೂರಾರು ಹಿಂದೂ ಧರ್ಮದ ಕುಟುಂಬಗಳಿವೆ. ಇಲ್ಲಿನ ಗ್ರಾಮಸ್ಥರು ಕಳೆದ 60 ವರ್ಷಗಳಿಂದ ಈ ಗ್ರಾಮದಲ್ಲಿನ ಒಂದು ಭೂಪ್ರದೇಶವನ್ನು ಸ್ಮಶಾನವಾಗಿ ಬಳಸುತ್ತಿದ್ದರು. ಸ್ಮಶಾನ ಅಭಿವೃದ್ಧಿಗೆ ಒತ್ತಾಯಿಸಿ ಮಂಡ್ಯ ಜಿಲ್ಲೆಯ ಹೊಸಬೂದನೂರು ಗ್ರಾಮಸ್ಥರು ಪ್ರತಿಭಟನೆಗೆ ಇಳಿದಿದ್ದಾರೆ.



# 'ಲಂಡನ್ ಬುಕ್ ಆಫ್ ರೆಕಾರ್ಡ್ಸ್'ಗೆ ಶಕ್ತಿ ಯೋಜನೆ, KSRTC ಸೇರ್ಪಡೆ!




ಬೆಂಗಳೂರು : 'ಲಂಡನ್ ಬುಕ್ ಆಫ್ ರೆಕಾರ್ಡ್ಸ್' ಗೆ ಶಕ್ತಿ ಯೋಜನೆ ಹಾಗೂ ಕೆಎಸ್ ಆರ್ ಟಿಸಿ ಸೇರ್ಪಡೆಯಾಗಿದ್ದು, ಸಿಎಂ ಸಿದ್ದರಾಮಯ್ಯ ಸಂತಸ ವ್ಯಕ್ತಪಡಿಸಿದ್ದಾರೆ. ಇತ್ತೀಚೆಗೆ ಗೋಲ್ಡನ್ ಬುಕ್ ಆಫ್ ರೆಕಾರ್ಡ್ಸ್' ಗೆ ಶಕ್ತಿ ಯೋಜನೆ ಸೇರ್ಪಡೆಯಾಗಿತ್ತು. ಇದೀಗ 'ಲಂಡನ್ ಬುಕ್ ಆಫ್ ರೆಕಾರ್ಡ್ಸ್' ಗೆ ಶಕ್ತಿ ಯೋಜನೆ ಸೇರ್ಪಡೆಯಾಗಿದೆ. ಅದೇ ರೀತಿ ಕೆಎಸ್ ಆರ್ ಟಿಸಿ ಕೂಡ ಲಂಡನ್ ಬುಕ್ ಆಫ್ ರೆಕಾರ್ಡ್ಸ್ ಗೆ ಸೇರ್ಪಡೆಯಾಗಿದೆ. ಲಂಡನ್ ಬುಕ್ ಆಫ್ ವರ್ಲ್ಡ್ ರೆಕಾರ್ಡ್ಸ್‌ನಿಂದ ಪ್ರಮಾಣೀಕರಿಸಲ್ಪಟ್ಟ ಎರಡು ಐತಿಹಾಸಿಕ ವಿಶ್ವ ದಾಖಲೆಗಳೊಂದಿಗೆ ಕರ್ನಾಟಕ ಜಾಗತಿಕ ವೇದಿಕೆಗೆ ಪ್ರವೇಶಿಸಿದೆ.

# ಸ್ಯಾಟಲೈಟ್ ಟೌನ್ ರಿಂಗ್ ರೋಡ್‌ಗೆ ಭಾರೀ ಹಿನ್ನಡೆ!



ಬೆಂಗಳೂರು : ಬೆಂಗಳೂರಿನ ದಟ್ಟಣೆಯನ್ನು ಕಡಿಮೆ ಮಾಡುವ ಗುರಿಯನ್ನು ಹೊಂದಿದ್ದ ಮಹತ್ವಾಕಾಂಕ್ಷೆಯ ಸ್ಯಾಟಲೈಟ್ ಟೌನ್‌ರಿಂಗ್ ರೋಡ್ ಯೋಜನೆಗೆ ಭಾರೀ ಹಿನ್ನಡೆ ಎದುರಾಗಿದೆ. ವಿಳಂಬ ಮತ್ತು ವೆಚ್ಚದ ಹೆಚ್ಚಳದ ಕಾರಣ ನೀಡಿ ಭಾರತ್‌ಮಾಲಾ ಪರಿಯೋಜನದ ಅಡಿಯಲ್ಲಿ ಯೋಜನೆಗಳನ್ನು ಕೇಂದ್ರ ಸರ್ಕಾರ ಸ್ಥಗಿತಗೊಳಿಸಿದ ನಂತರ ಎಸ್‌ಟಿಆರ್‌ಆರ್ ದೊಡ್ಡ ಹಿನ್ನಡೆಯನ್ನು ಕಂಡಿದೆ. ಈ ಕ್ರಮವು ಪಶ್ಚಿಮ ವಿಭಾಗ ಸೇರಿದಂತೆ ಹಲವಾರು ಪ್ರಮುಖ ಹೆದ್ದಾರಿ ಕಾಮಗಾರಿಗಳ ಟೆಂಡರ್ ಅಂತಿಮಗೊಳಿಸುವಿಕೆಯನ್ನು ಸ್ಥಗಿತ ಗೊಳಿಸಿದೆ. ಇದು ಕರ್ನಾಟಕದಲ್ಲಿ 1,009.8 ಹೆಕ್ಟೇರ್ ಮತ್ತು ತಮಿಳುನಾಡಿನಲ್ಲಿ 340 ಹೆಕ್ಟೇರ್ ಪ್ರದೇಶವನ್ನು ಒಳಗೊಂಡಿದೆ.


# ಶರಾವತಿ ಯೋಜನೆಗೆ ವಿರೋಧ: ಸ್ಥಳೀಯರಿಂದ ತಡೆ



ಗೇರುಸೊಪ್ಪ: ಶರಾವತಿ ಪಂಪ್ಡ್ ಸ್ಟೋರೇಜ್ ಯೋಜನೆಗೆ ಸ್ಥಳೀಯರಿಂದ ತೀವ್ರ ವಿರೋಧ ವ್ಯಕ್ತವಾಗಿದ್ದು, ಯೋಜನಾ ಪ್ರದೇಶದಲ್ಲಿ ಮಣ್ಣು ಮತ್ತು ನೀರಿನ ಮಾದರಿ ಸಂಗ್ರಹಕ್ಕೆ ಬಂದಿದ್ದ ಕೇಂದ್ರ ಸರ್ಕಾರದ 13 ಅಧಿಕಾರಿಗಳ ತಂಡವನ್ನು ಸ್ಥಳೀಯರು ಅಡ್ಡಗಟ್ಟಿ ವಿಚಾರಣೆ ನಡೆಸಿ ಪ್ರತಿಭಟನೆ ವ್ಯಕ್ತಪಡಿಸಿದ್ದಾರೆ. ಕರ್ನಾಟಕ ವಿದ್ಯುತ್ ನಿಗಮದ (KPC) ಸಂರಕ್ಷಿತ ಪ್ರದೇಶದ ವ್ಯಾಪ್ತಿಯಲ್ಲಿರುವ ಗೇರುಸೊಪ್ಪಾ ಡ್ಯಾಂ ಸಮೀಪದ ಬೆಗೋಡಿನಲ್ಲಿ ಕೇಂದ್ರ ಕೃಷಿ ಸಂ ಶೋಧನಾ ಮಂಡಳಿ (ICAR) ಮತ್ತು ಹರಿಯಾಣ ಮೂಲದ ವ್ಯಾಪ್ರೋಸ್ (WAPCOS) ಸಂಸ್ಥೆಯ ಒಟ್ಟು 13 ಮಂದಿ ಅಧಿಕಾರಿಗಳು ಮಣ್ಣು ಹಾಗೂ ನೀರಿನ ಮಾದರಿ ಸಂಗ್ರಹ ಕಾರ್ಯ ನಡೆಸುತ್ತಿದ್ದರು ಎನ್ನಲಾಗಿದೆ.

# ಬೆಳೆ ನಷ್ಟ ಪರಿಹಾರಕ್ಕಾಗಿ ರೈತ ಸಂಘದ ಪ್ರತಿಭಟನೆ

ರಾಯಚೂರು: ಅತಿವೃಷ್ಟಿಯಿಂದಾದ ಬೆಳೆ ನಷ್ಟದ ಸಮೀಕ್ಷೆ ನಡೆಸಿ ಪರಿಹಾರ ಕೊಡಬೇಕು ಎನ್ನುವುದು ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ನೇತೃತ್ವದಲ್ಲಿ ರೈತರು ಇಲ್ಲಿಯ ಹಳೆಯ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಿದರು. ಎಪಿಎಂಸಿ ಆವರಣದಿಂದ ಪ್ರತಿಭಟನಾ ಮೆರವಣಿಗೆ ಆರಂಭಿಸಿ ಘೋಷಣೆಗಳನ್ನು ಕೂಗುತ್ತ ಹಳೆಯ ಜಿಲ್ಲಾಧಿಕಾರಿ ಕಚೇರಿ ಆವರಣಕ್ಕೆ ಬಂದರು. ನಂತರ ಗೇಟ್ ಬಳಿಗೆ ಕುಳಿತು ಧರಣಿ ಮಾಡಿದರು. ಜಿಲ್ಲೆಯಲ್ಲಿ ತರಕಾರಿ ಬೆಳೆಗಳ ಪ್ರತ್ಯೇಕ ಸಮೀಕ್ಷೆ ನಡೆಸಿ ಪರಿಹಾರ ಕೊಡಬೇಕು ಎಂದು ಆಗ್ರಹಿಸಿದರು.



# ಬ್ಯಾಂಕ್ ವಿಲೀನ : ಇತಿಹಾಸ ಸೇರಲಿದೆ 4 ಸರ್ಕಾರಿ ಬ್ಯಾಂಕ್‌ಗಳು?





ನವದೆಹಲಿ : ಕೇಂದ್ರ ಸರ್ಕಾರ ಮತ್ತೊಂದು ಸುತ್ತಿನ ಸರ್ಕಾರಿ ಬ್ಯಾಂಕ್‌ಗಳ ವಿಲೀನ ಪ್ರಕ್ರಿಯೆ ಆರಂಭಿಸಿದೆ. ಇಂಡಿಯನ್ ಓವರ್‌ಸೀಸ್ ಬ್ಯಾಂಕ್, ಸೆಂಟ್ರಲ್ ಬ್ಯಾಂಕ್ ಆಫ್ ಇಂಡಿಯಾ, ಬ್ಯಾಂಕ್ ಆಫ್ ಇಂಡಿಯಾ ಮತ್ತು ಬ್ಯಾಂಕ್ ಆಫ್ ಮಹಾರಾಷ್ಟ್ರಗಳನ್ನು ಪಂಜಾಬ್ ನ್ಯಾಷನಲ್ ಬ್ಯಾಂಕ್, ಬ್ಯಾಂಕ್ ಆಫ್ ಬರೋಡಾ ಮತ್ತು ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ನಂತಹ ದೊಡ್ಡ ಬ್ಯಾಂಕ್‌ಗಳೊಂದಿಗೆ ವಿಲೀನಗೊಳಿಸುವ ಸಾಧ್ಯತೆ ಇದೆ ಎಂದು ಸರ್ಕಾರಿ ಮೂಲಗಳು ತಿಳಿಸಿವೆ. ಕೇಂದ್ರ ಸರ್ಕಾರವು ಪಿಎಸ್‌ಬಿ ಬಲವರ್ಧನೆಯನ್ನು ಪುನರುಜ್ಜೀವನಗೊಳಿಸಲು ಪ್ರಯತ್ನಿಸುತ್ತಿರುವಾಗ ಈ ಬೆಳವಣಿಗೆ ಸಂಭವಿಸಿದೆ ಎನ್ನಲಾಗಿದೆ.

# ದೀಪಾವಳಿಗೂ ಮುನ್ನ ಜಿಎಸ್‌ಟಿ ಪ್ರಮಾಣ ಇಳಿಕೆ-ನಿರ್ಮಲ ಸೀತಾರಾಮನ್



ಕೊಪ್ಪಳ: ರಾಜ್ಯ ಪ್ರವಾಸ ಕೈಗೊಂಡಿರುವ ಕೇಂದ್ರ ವಿತ್ತ ಸಚಿವೆ ನಿರ್ಮಲ ಸೀತಾರಾಮನ್ ದೀಪಾವಳಿಗೂ ಮುನ್ನ ಜಿಎಸ್‌ಟಿ ಪ್ರಮಾಣ ಇಳಿಕೆ ಮಾಡಲಾಗುವುದು ಎಂದು ಕೊಪ್ಪಳದಲ್ಲಿ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದರು. ಕೊಪ್ಪಳದಲ್ಲಿ ಸುದ್ದಿಗಾರರೊಂದಿಗೆ ಕನ್ನಡದಲ್ಲಿಯೇ ಮಾತು ಶುರು ಮಾಡಿ, ನಾನು ಕರ್ನಾಟಕದಿಂದ ಆಯ್ಕೆಯಾಗಿದ್ದೇನೆ, ಕಲ್ಯಾಣ ಕರ್ನಾಟಕ ಭಾಗದ 7 ಜಿಲ್ಲೆಗಳಲ್ಲಿ ಒಂದೊಂದು ರೈತರಿಗೆ ಉಪಯೋಗವಾಗುವ ಯೋಜನೆ ಆರಂಭಿಸಲಾಗಿದೆ. ರೈತರಿಗೆ ಉತ್ಪಾದನೆಯ ಮೌಲ್ಯವರ್ಧಿತರ ತರಬೇತಿ ನೀಡಲಾಗುವುದು. ಕೊಪ್ಪಳವು ಇಡೀ ರಾಜ್ಯಕ್ಕೆ ಅನ್ನ ನೀಡುವ ಸ್ಥಳ. ಇಲ್ಲಿ ಹಣ್ಣು ಹಾಗು ತರಕಾರಿಗೆ ಮೌಲ್ಯವರ್ಧನೆ ಮಾಡಲಾಗುವುದು ಎಂದರು.


# ಆಪರೇಷನ್ ಸಿಂದೂರ್‌ಗೆ ಪಾಕ್‌ನ 100ಕ್ಕೂ ಹೆಚ್ಚು ಸೈನಿಕರು ಬಲಿ: ಡಿಜಿಎಂಒ



ನವದೆಹಲಿ: ಆಪರೇಷನ್ ಸಿಂಧೂರ್ ಸಮಯದಲ್ಲಿ ಪಾಕಿಸ್ತಾನ ಗಮನಾರ್ಹ ಮಿಲಿಟರಿ ನಷ್ಟವನ್ನು ಅನುಭವಿಸಿದೆ, ನಿಯಂತ್ರಣ ರೇಖೆಯಲ್ಲಿ 100ಕ್ಕೂ ಹೆಚ್ಚು ಸೈನಿಕರು ಸಾವನ್ನಪ್ಪಿದರು ಎಂದು ಭಾರತೀಯ ಸೇನೆಯ ಮಿಲಿಟರಿ ಕಾರ್ಯಾಚರಣೆಗಳ ಮಹಾನಿರ್ದೇಶಕ ಲೆಫ್ಟಿನೆಂಟ್ ಜನರಲ್ ರಾಜೀವ್ ಘಾಯ್ ಹೇಳಿದ್ದಾರೆ. ಸಾವುನೋವುಗಳಿಗೆ ಸಾಕ್ಷಿಯಾಗಿ ಪಾಕಿಸ್ತಾನದ ಮರಣೋತ್ತರ ಮಿಲಿಟರಿ ಪ್ರಶಸ್ತಿಗಳ ಪಟ್ಟಿಯನು, ಜನರಲ್ ಉಲ್ಲೇಖಿಸಿದ್ದಾರೆ. ಸೈನಿಕರ ನಷ್ಟಗಳ ಜೊತೆಗೆ, 4 ದಿನಗಳ ಸಂಘರ್ಷದ ಸಮಯದಲ್ಲಿ ಪಾಕಿಸ್ತಾನ ಕನಿಷ್ಠ 12 ವಿಮಾನಗಳನ್ನು ಕಳೆದುಕೊಂಡಿದೆ ಎಂದು ಲೆಫ್ಟಿನೆಂಟ್ ಜನರಲ್ ಘಾಯ್ ದೃಢಪಡಿಸಿದ್ದಾರೆ.

# ವೋಟರ್ಸ್ ಲಿಸ್ಟ್ ಅಕ್ರಮ:ಎಸ್‌ಐಟಿ ತನಿಖೆಗೆ ನಿರಾಕರಿಸಿದ ಸುಪ್ರೀಂ

ನವದೆಹಲಿ : ಬೆಂಗಳೂರು ಕೇಂದ್ರ ಲೋಕಸಭಾ ಕ್ಷೇತ್ರದಲ್ಲಿ ಮತದಾರರ ಪಟ್ಟಿಯಲ್ಲಿ ದೊಡ್ಡ ಮಟ್ಟದ ಅಕ್ರಮ ನಡೆದಿದೆ ಎನ್ನುವ ಆರೋಪದ ಮೇಲೆ ಎಸ್‌ಐಟಿಯಿಂದ ತನಿಖೆ ನಡೆಸಬೇಕು ಎಂದು ಮಾಡಲಾಗಿದ್ದ ಮನವಿಯನ್ನು ಸುಪ್ರೀಂಕೋರ್ಟ್ ತಿರಸ್ಕರಿಸಿದೆ. ರಾಹುಲ್ ಗಾಂಧಿ ಸೇರಿದಂತೆ ವಿಪಕ್ಷಗಳು ಮತದಾರರ ಪಟ್ಟಿಯಲ್ಲಿ ಅಕ್ರಮವಾಗಿದೆ ಎಂದು ಆರೋಪಿಸಿದ್ದರು. ಈ ಹಿನ್ನೆಲೆಯಲ್ಲಿ ಮನವಿಯನ್ನು ಆಲಿಸಿದ ನ್ಯಾಯಮೂರ್ತಿಗಳಾದ ಸೂರ್ಯಕಾಂತ್ ಮತ್ತು ಜಯಮಾಲ್ಯ ಬಾಗಚಿ ಅವರಿದ್ದ ಸರ್ವೋಚ್ಚ ನ್ಯಾಯಪೀಠ, ಎಸ್‌ಐಟಿಗೆ ತನಿಖೆ ವಹಿಸಲು ನಿರಾಕರಿಸಿತು. ಈ ವಿಷಯವನ್ನು ಭಾರತೀಯ ಚುನಾವಣಾ ಆಯೋಗದಲ್ಲಿ ಬಗೆಹರಿಸಿಕೊಳ್ಳಬೇಕೆಂದು ಅರ್ಜಿದಾರರಿಗೆ ಕೋರ್ಟ್ ಸೂಚಿಸಿತು.



# ಆಫ್ಘನ್ನರ ಧೈರ್ಯವನ್ನು ಪರೀಕ್ಷಿಸಬೇಡಿ: ಪಾಕ್‌ಗೆ ತಾಲಿಬಾನ್ ಎಚ್ಚರಿಕೆ




ನವದೆಹಲಿ: ಅಫ್ಘಾನಿಸ್ತಾನದ ನೆಲವನ್ನು ಯಾ ವುದೇ ದೇಶದ ವಿರುದ್ಧ ಬಳಸಲು ಅನುಮತಿಸಲಾಗುವುದಿಲ್ಲ ಎಂದು ತಾಲಿಬಾನ್ ವಿದೇಶಾಂಗ ಸಚಿವ ಅಮೀರ್ ಖಾನ್ ಮುತ್ತಕಿ ಶುಕ್ರವಾರ ಭಾರತಕ್ಕೆ ಭರವಸೆ ನೀಡಿದ್ದಾರೆ. ಪತ್ರಿಕಾಗೋಷ್ಠಿ ಯಲ್ಲಿ, ಭಾರತಕ್ಕೆ ತಮ್ಮ ಮೊದಲ ಭೇಟಿಯಲ್ಲಿರುವ ಮುತ್ತಕಿ, "ಅಫ್ಘನ್ನರ ಧೈರ್ಯವನ್ನು ಪರೀಕ್ಷಿಸಬಾರದು" ಎಂದು ಪಾಕಿಸ್ತಾನಕ್ಕೆ ಎಚ್ಚರಿಕೆ ನೀಡಿದರು.

# ಕರಾವಳಿ ತರಂಗಿಣಿ ಕಲಾ ತರಂಗಿಣಿ

## ಅನೂಪ್ ರೇವಣ್ಣ ಈಗ 'ಕನಕರಾಜ'ಇದು ಸಿ.ಎಂ ಅಭಿಮಾನಿಯ ಕಥೆ

ಸುಕೃತಿ ಚಿತ್ರಾಲಯ ಲಾಂಛನದಲ್ಲಿ ಎಸ್ ಆರ್ ಸನತ್ ಕುಮಾರ್ ಅವರು ನಿರ್ಮಿಸುತ್ತಿರುವ, ಡಾ॥ವಿ.ನಾಗೇಂದ್ರಪ್ರಸಾದ್ ಕಥೆ, ಚಿತ್ರಕಥೆ, ಸಂಭಾಷಣೆ ಬರೆದು ಸಂಗೀತ ಸಂಯೋಜನೆಯನ್ನೂ ಮಾಡುತ್ತಿರುವ ವಿ. ಎಂ.ರಾಜು ಮತ್ತು ನೀಲ್ ಕೆಂಗಾಪುರ ಜಂಟಿಯಾಗಿ ನಿರ್ದೇಶಿಸುತ್ತಿರುವ ಹಾಗೂ ಎಚ್ ಎಂ ರೇವಣ್ಣ ಅವರ ಪುತ್ರ ಅನೂಪ್ ರೇವಣ್ಣ ನಾಯಕನಾಗಿ ನಟಿಸುತ್ತಿರುವ 'ಕನಕರಾಜ' ಚಿತ್ರದ ಮುಹೂರ್ತ ಸಮಾರಂಭ ಮಹಾಲಕ್ಷ್ಮಿ ಲೇಔಟ್‌ನ ಪ್ರಸನ್ನ ಶ್ರೀವೀರಾಂಜನೇಯ ಸ್ವಾಮಿ ದೇವಸ್ಥಾನದಲ್ಲಿ ಅದ್ದೂರಿಯಾಗಿ ನೆರವೇರಿತು. ಚಿತ್ರದ ಮೊದಲ ಸನ್ನಿವೇಶಕ್ಕೆ ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಎಚ್ ಎಂ ರೇವಣ್ಣ ಆರಂಭ ಫಲಕ ತೋರಿದರು. ಕರ್ನಾಟಕ ರಾಜ್ಯ ಸಾರಿಗೆ ಹಾಗೂ ಮುಜರಾಯಿ ಸಚಿವರಾದ ರಾಮಲಿಂಗ ರೆಡ್ಡಿ ಅವರು ಕ್ಯಾಮೆರಾ ಚಾಲನೆ ಮಾಡಿದರು. ಕನ್ನಡ ಚಲನ ಚಿತ್ರ ನಿರ್ಮಾಪಕರ ಸಂಘದ ಅಧ್ಯಕ್ಷರಾದ ಉಮೇಶ್ ಬಣಕಾರ್, ಕರ್ನಾಟಕ ಚಲನಚಿತ್ರ ನಿರ್ದೇಶಕರ ಸಂಘದ ಅಧ್ಯಕ್ಷರಾದ ಎನ್ನಾರ್ ಕೆ ವಿಶ್ವನಾಥ್ ಸೇರಿದಂತೆ ಮುಂತಾದ ಚಿತ್ರ ರಂಗದ ಗಣ್ಯರು ಮುಹೂರ್ತ ಸಮಾರಂಭಕ್ಕೆ ಆಗಮಿಸಿ ಶುಭ ಕೋರಿದರು. ನಂತರ ಚಿತ್ರತಂಡದ ಸದಸ್ಯರು ಮಾತನಾಡಿದರು. ಇಂದಿನ ಸಮಾರಂಭಕ್ಕೆ ಆಗಮಿಸಿರುವ ಪ್ರತಿಯೊಬ್ಬರಿಗೂ ಧನ್ಯವಾದ ಎಂದು ಮಾತನಾಡಿದ ನಿರ್ಮಾಪಕ ಸನತ್ ಕುಮಾರ್, 'ಕನಕರಾಜ' ನಮ್ಮ ಸಂಸ್ಥೆಯಿಂದ ನಿರ್ಮಾಣವಾಗುತ್ತಿರುವ ಆರನೇ ಚಿತ್ರ. ಸಮಾಜಕ್ಕೆ ಉತ್ತಮ ಸಂದೇಶ ನೀಡುವ ಚಿತ್ರಗಳನ್ನು ನಿರ್ಮಾಣ ಮಾಡುತ್ತಾ ಬಂದಿರುವ ನಮ್ಮ ಸಂಸ್ಥೆಯಿಂದ ನಿರ್ಮಾಣವಾಗುತ್ತಿರುವ "ಕನಕರಾಜ" ಚಿತ್ರದಲ್ಲೂ ಯುವ ಜನತೆಗೆ ಉತ್ತಮ ಸಂದೇಶವಿದೆ. ನಮ್ಮ ರಾಜ್ಯದ ವಿವಿಧ ಊರುಗಳಲ್ಲಿ, ಪಕ್ಕದ ರಾಜ್ಯಗಳಲ್ಲಿ ಹಾಗೂ ವಿದೇಶದಲ್ಲೂ ಈ ಚಿತ್ರದ ಚಿತ್ರೀಕರಣ ನಡೆಯಲಿದೆ ಎಂದು ನಿರ್ಮಾಪಕ ಸನತ್ ಕುಮಾರ್ (ಮೀನಾಕ್ಷಿ ಕಾಫಿಬಾರ್) ತಿಳಿಸಿದರು. ನಾವು ಸಾಮಾನ್ಯವಾಗಿ ಯುವ ಜನತೆ ರಾಜಕೀಯಕ್ಕೆ ಬರಬೇಕು. ರಾಜಕಾರಣಿಯಾಗಬೇಕು ಅಂತ ಹೇಳುತ್ತಿರುತ್ತೇವೆ. ಈ ಮಾತನ್ನೇ ಪ್ರಮುಖವಾಗಿಟ್ಟುಕೊಂಡು ಈ ಚಿತ್ರದ ಕಥೆ ಮಾಡಲಾಗಿದೆ. ಚಿತ್ರದ ನಾಯಕ ವಕೀಲನಾಗಿದರೂ ರಾಜಕೀಯದಲ್ಲೂ ಸಕ್ರಿಯ ಎಂದರು.



## ಜೈ ಗದಾ ಕೇಸರಿ ಟೀಸರ್ ಮತ್ತು ಹಾಡುಗಳು ಬಿಡುಗಡೆ

ಜೈ ಗದಾ ಕೇಸರಿ ಚಿತ್ರದ ಟೀಸರ್ ಮತ್ತು ಹಾಡುಗಳ ಬಿಡುಗಡೆ ಸಮಾರಂಭ ಶ್ರೀ ರೇಣುಕಾಂಬ ಸ್ಟುಡಿಯೋದಲ್ಲಿ ಅದ್ದೂರಿಯಾಗಿ ನಡೆಯಿತು. ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ಅಧ್ಯಕ್ಷ ನರಸಿಂಹಲು, ಮಾಜಿ ಅಧ್ಯಕ್ಷ ಸಾ.ರಾ.ಗೋವಿಂದು, ಕರ್ನಾಟಕ ನಿರ್ಮಾಪಕ ಸಂಘದ ಅಧ್ಯಕ್ಷ ಉಮೇಶ್ ಬಣಕಾರ್, ಉಜ್ವಲ್ ರಘು ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಬಿ.ಬಿ.ಮೂವೀ ಕ್ರಿಯೇಶನ್ಸ್ ಅಡಿಯಲ್ಲಿ ಕೊಪ್ಪಳ ಮೂಲದ ಉದ್ಯಮಿ ಬಸವರಾಜ್ ಭಜಂತ್ರಿ ಕಲಾವಿದರನ್ನು ಉಳಿಸುವ ಸಲುವಾಗಿ ಹಾಗೂ ಕನ್ನಡ ನಾಡಿಗೆ ಹೆಮ್ಮೆ ತರಬೇಕೆಂಬ ಅಭಿಲಾಷೆಯಿಂದ ಬಂಡವಾಳ ಹೂಡಿದ್ದಾರೆ. ಯತೀಶ್ ಕುಮಾರ್ ವಿ ಮತ್ತು ಮಂಜು ಹೊಸಪೇಟೆ ಜಂಟಿಯಾಗಿ ಸಿನಿಮಾಕ್ಕೆ ಕಥೆ, ಚಿತ್ರಕಥೆ, ಸಂಭಾಷಣೆ ಬರೆದು ನಿರ್ದೇಶನ ಮಾಡಿದ್ದಾರೆ. ನಾಗಮೂರ್ತಿ ಮತ್ತು ಕುಮಾರ್ ಕೋ ಡೈರೆಕ್ಟರ್ ಆಗಿರುತ್ತಾರೆ. ತಿಪ್ಪೆಸ್ವಾಮಿ (ಗೌಳಿ) ಕಾರ್ಯಕಾರಿ ನಿರ್ಮಾಪಕರಾಗಿರುತ್ತಾರೆ. ನಾಯಕರುಗಳಾಗಿ ರಾಜ್‌ಚರಣ್ ಬ್ರಹ್ಮಾವರ್ ಮತ್ತು ಈಶ್ವರನಾಯಕ. ಈ ಪೈಕಿ ಈಶ್ವರನಾಯಕ ಸಹ ನಿಮಾಪಕರಾಗಿ ಗುರುತಿಸಿಕೊಂಡಿದ್ದಾರೆ. ಜೀವಿತಾ ವಸಿಷ್ಠ ನಾಯಕಿ. ಕೋಮಲ್ ದೇವಕರ್ ಉಪನಾಯಕಿ. ಹಿರಿಯ ಕಲಾವಿದರುಗಳಾದ ಅವಿನಾಶ್, ಹೊನ್ನವಳ್ಳಿ ಕೃಷ್ಣ, ಧರ್ಮ, ಅರವಿಂದ ರಾವ್, ಜಯರಾಮ್, ಪ್ರಶಾಂತ್ ಸಿದ್ದಿ, ಲಕ್ಷಣದಾಸ್, ವರುಣ್, ರಮೇಶ್ ಮುಂತಾದವರು ನಟಿಸಿದ್ದಾರೆ. ಕಾರ್ತಿಕ್‌ವೆಂಕಟೇಶ್ ಮೂರು, ಪ್ರಸನ್ನ ಬೋಜಶೆಟ್ಟರ್ ಶೀರ್ಷಿಕೆ ಗೀತೆ ಹಾಗೂ ಜಾರ್ಜ್‌ಥಾಮಸ್ ಸ್ಯಾಮ್ ಸಂಗೀತ ಸಂಯೋಜಿಸಿದ್ದಾರೆ. ಛಾಯಾಗ್ರಹಣ ಶ್ಯಾಮ್ ಸಿಂಧನೂರು-ಎಸ್. ನಾಗರಾಜ್, ಸಂಕಲನ ಪೂಜಾ.ಎಸ್, ಸಾಹಸ ಸುಪ್ರೀಂ ಸುಬ್ಬು ಸೂರಿ-ರಾಮ್‌ದೇವ್ ಜಾನಿ-ವೈಲೆಂಟ್‌ವೇಲು-ಅಲ್ಟಿಮೇಟ್ ಶಿವು, ನೃತ್ಯ ಕಂಬಿರಾಜ್ ಅವರದಾಗಿದೆ. ಪುರಾಣದಲ್ಲಿ ರಾಮ ಮತ್ತು ಹನುಮಾನ್ ಬಗ್ಗೆ ಸಾಕಷ್ಟು ವಿಷಯಗಳು ಇರಲಿದೆ. ಅದೇ ರೀತಿ ಸಿನಿಮಾದಲ್ಲಿ ಆಂಜನೇಯನ ಗದೆಗೆ ಪ್ರಾಮುಖ್ಯತೆ ನೀಡಲಾಗಿದೆ.



## ಪ್ಯಾನ್ ಇಂಡಿಯಾ ಸಿನಿಮಾವಾಗಿ ತೆರೆಗೆ ಬರಲಿದೆ 'ಕೊರಗಜ್ಜ'

ಸುಧೀರ್ ಅತ್ತಾವರ್ ನಿರ್ದೇಶನದ ಹಾಗೂ ತ್ರಿವಿಕ್ರಮ ಸಪಲ್ಯ ನಿರ್ಮಾಣದ ಬಹು ನಿರೀಕ್ಷಿತ, ಸಕ್ಸಸ್ ಫಿಲಂಸ್ ಮತ್ತು ತ್ರಿವಿಕ್ರಮ ಸಿನಿಮಾಸ್ ಬ್ಯಾನರ್ ಅಡಿಯ "ಕೊರಗಜ್ಜ" ಚಿತ್ರದ ಫಸ್ಟ್ ಲುಕ್ ಟೀಸರ್ ಹಾಗೂ ತ್ರಿಡಿ ಮೋಷನ್ ಪೋಸ್ಟರ್ ಇತ್ತೀಚೆಗೆ ಅದ್ದೂರಿಯಾಗಿ ಬಿಡುಗಡೆಯಾಯಿತು. ದಕ್ಷಿಣ ಕನ್ನಡದ ವಾದ್ಯ ಹಿಮ್ಮೇಳ ಹಾಗೂ ಉಡುಪಿಯ ಮಹಿಳಾ ತಂಡದವರ ಹುಲಿ ನೃತ್ಯದ ಮೆರವಣಿಗೆಯಲ್ಲಿ ಸಾಗಿಬಂದ "ಕೊರಗಜ್ಜ" ನ ಎರಡು ಕಟೌಟ್‌ಗಳು ಡೊಳ್ಳು, ಕೊಂಬು-ಕಹಳೆ, ಕೊಳಲು, ತಾಸೆ, ತಾಳಗಳ ವಾದ್ಯಮೇಳದ ಹಿನ್ನೆಯಲ್ಲಿ ಹುಲಿವೇಶದ ಅಬ್ಬರದ ನೃತ್ಯದ ನಡುವೆ ಫಸ್ಟ್ ಲುಕ್ ಅನಾವರಣ ಗೊಂಡಿರುವುದು ಅತ್ಯಂತ ವಿಶೇಷವಾಗಿತ್ತು. ಸಮಾರಂಭದಲ್ಲಿ ಉಪಸ್ಥಿತರಿದ್ದ ಮಾಜಿ ಸಚಿವೆ ಮೋಟಮ್ಮ, ನಿರ್ಮಾಪಕಿ-ನಿರ್ದೇಶಕಿ ವಿಜಯಲಕ್ಷ್ಮಿ ಸಿಂಗ್, ನಿರ್ದೇಶಕ, ನಿರ್ಮಾಪಕ, ಸಿನಿಮಾದ ನಟ ನಟಿಯರೆಲ್ಲ ಕಟೌಟ್‌ಗೆ ಪುಷ್ಪಾರ್ಚನೆಗೊಳಿಸಿರುವುದು ಕಾರ್ಯಕ್ರಮಕ್ಕೆ ವಿಶೇಷವಾದ ಮೆರುಗನ್ನು ನೀಡಿತು. ಮೂರು ವರ್ಷಗಳ ಹಿಂದೆ ಆರಂಭವಾದ ಸಿನಿಮಾ ಈಗ ಅನೇಕ ಅಡೆತಡೆಗಳನ್ನು ದಾಟಿ ಬಿಡುಗಡೆಯ ಹಂತ ತಲುಪಿದೆ. ಇದರ ಪೂರ್ವಭಾವಿಯಾಗಿ ಇಂದು ಫಸ್ಟ್ ಲುಕ್ ಟೀಸರ್ ಹಾಗೂ ತ್ರಿಡಿ ಮೋಷನ್ ಪೋಸ್ಟರ್ ಬಿಡುಗಡೆ ಮಾಡಿದ್ದೇವೆ. ನನಗೆ ತಿಳಿದ ಹಾಗೆ ದಕ್ಷಿಣ ಭಾರತದಲ್ಲೇ ಇದೇ ಮೊದಲ ಬಾರಿಗೆ ಈ ರೀತಿಯ ತ್ರಿಡಿ ಪೋಸ್ಟರ್ ಮಾಡಿರುವುದು. ಕೊರಗಜ್ಜನ ಆಶೀರ್ವಾದದಿಂದ ಸಿನಿಮಾ ಬಂದಿದೆ.




## ಟ್ರೇಲರ್‌ನಲ್ಲೇ ಕುತೂಹಲ ಮೂಡಿಸಿದೆ 'ಚತುಷ್ಪಥ'

ರೂಪ ಬಾಯಿ ಹಾಗೂ ಕೃಷ್ಣೋಜಿ ರಾವ್ ಅವರು ನಿರ್ಮಿಸಿರುವ ಹಾಗೂ ಕೃಷ್ಣೋಜಿ ರಾವ್ ಅವರೆ ನಿರ್ದೇಶಿಸಿರುವ ಹಾಗೂ ಮಿಲನ ನಾಗರಾಜ್, ಜಗನ್, ಕಿರಣ್ ರಾಜ್, ಶಿಲ್ಪ ಪ್ರಮುಖ ಪಾತ್ರಗಳಲ್ಲಿ ನಟಿಸಿರುವ 'ಚತುಷ್ಪಥ' ಚಿತ್ರದ ಟ್ರೇಲರ್ ಇತ್ತೀಚೆಗೆ ಬಿಡುಗಡೆಯಾಯಿತು. ವಿಭಿನ್ನ ಕಂಟೆಂಟ್ ವುಳ್ಳ ಈ ಚಿತ್ರ ಟ್ರೇಲರ್‌ನಲ್ಲೇ ನೋಡುಗರ ಗಮನ ಸೆಳೆದಿದೆ. ಟ್ರೇಲರ್ ಬಿಡುಗಡೆ ನಂತರ ಚಿತ್ರತಂಡದ ಸದಸ್ಯರು ಮಾತನಾಡಿದರು. 'ಚತುಷ್ಪಥ' ಎಂದರೆ ನಾಲ್ಕು ದಾರಿಗಳು. ಹೆದ್ದಾರಿಗಳಲ್ಲಿ ನಾವು ಇದನ್ನು ನೋಡಬಹುದು. ಆದರೆ ನಮ್ಮ ಚಿತ್ರದಲ್ಲಿ ಬಡ ಜನರ ವರ್ಗ, ಮಧ್ಯಮ ವರ್ಗ, ಶ್ರೀಮಂತರ ವರ್ಗ ಹಾಗೂ ಕಾನೂನು ಮತ್ತು ಸುವ್ಯವಸ್ಥೆ ಈ ನಾಲ್ಕು ಅಂಶಗಳನಿಟ್ಟುಕೊಂಡು ನಾಲ್ಕು ಪ್ರಮುಖ ಪಾತ್ರಗಳ ಸುತ್ತ ಕಥೆ ಹೆಣೆಯಲಾಗಿದೆ. ಚಿತ್ರದಲ್ಲಿ ನಾಲ್ಕು ಜನರ ದಾರಿ ಬೇರೆಯೇ ಆಗಿರುತ್ತದೆ. ಆ ದಾರಿಗಳು ಎಲ್ಲಿ ತಲುಪತ್ತದೆ. ಎಂಬುದನ್ನು ಸಿನಿಮಾದಲ್ಲಿ ನೋಡಬೇಕು. ವಿಭಿನ್ನ ಕಂಟೆಂಟ್ ಹೊಂದಿರುವ ನಮ್ಮ ಚಿತ್ರದಲ್ಲಿ ನೋಡುಗರಿಗೆ ಬೇಕಾದ ಎಲ್ಲಾ ಅಂಶಗಳು ಇದೆ. ಮೊದಲ ಪ್ರತಿ ಸಿದ್ದವಾಗಿದೆ. ಸದ್ಯದಲ್ಲೇ ಚಿತ್ರ ನಿಮ್ಮ ಮುಂದೆ ಬರಲಿದೆ. 'ಚತುಷ್ಪಥ' ನನ್ನ ಚೊಚ್ಚಲ ನಿರ್ದೇಶನದ ಚಿತ್ರ. ನಮ್ಮ ಚಿತ್ರಕ್ಕೆ ನಿಮ್ಮೆಲ್ಲರ ಪ್ರೋತ್ಸಾಹವಿರಲಿ ಎಂದು ನಿರ್ದೇಶಕ ಕೃಷ್ಣೋಜಿ ರಾವ್ ತಿಳಿಸಿದರು. ನಿರ್ದೇಶಕರು ನನಗೆ ಕಥೆ ಹೇಳಿದಾಗ ನನ್ನ ಪಾತ್ರದ ಬಗ್ಗೆ ಕೇಳಿ ಬಹಳ ಇಷ್ಟವಾಯಿತು. ಈ ಚಿತ್ರದಲ್ಲಿ ನಾಲ್ಕು ಜನರ ದಾರಿ ನಾಲ್ಕು ಕಡೆ ಹೋಗಿ ಮುಟ್ಟುತ್ತದೆ. ಅದರಲ್ಲಿ ನನ್ನದು ಒಂದು ದಾರಿ. ಈ ನಾಲ್ಕು ದಾರಿ ಎಲ್ಲಿ ಹೋಗಿ ಮುಟ್ಟುತ್ತದೆ ಎನ್ನುವುದೆ 'ಚತುಷ್ಪಥ'. ಎಂದು ಪ್ರಮುಖ ಪಾತ್ರದಲ್ಲಿ ನಟಿಸಿರುವ ನಟ ಜಗನ್ ತಿಳಿಸಿದರು. ಚಿತ್ರದಲ್ಲಿ ಎರಡು ಹಾಡುಗಳು ಹಾಗೂ ಒಂದು ಬಿಟ್ ಇದೆ. ಹಾಡುಗಳು ಚೆನ್ನಾಗಿದೆ. ಸದ್ಯದಲ್ಲೇ ಬಿಡುಗಡೆಯಾಗಲಿದೆ ಎಂದರು.



## ಪ್ರೇಮಕಥೆ ಜೊತೆಗೆ ಹುಲಿವೇಷದ ಕಥೆ

ಮಾರ್ನಮಿ ಕರಾವಳಿ ಭಾಗದ ಹುಲಿವೇಷ ಹಿನ್ನೆಲೆಯ ಕಥೆ 1990ರ ದಶಕ ಹಾಗೂ ಪ್ರಸ್ತುತ ಕಾಲಘಟ್ಟದಲ್ಲಿ ನಡೆಯುವ ಸ್ಟೋರಿ.



ಈ ಚಿತ್ರದ ಮೂಲಕ ನಿರ್ದೇಶಕ ರಿಷಿತ್ ಶೆಟ್ಟಿ ಹುಲಿ ವೇಷ ಸಂಸ್ಕೃತಿಯನ್ನು ಇಡೀ ಪ್ರಪಂಚಕ್ಕೆ ತೋರಿಸಲು ಹೊರಟಿದ್ದಾರೆ. ಸದ್ಯ ಚಿತ್ರೀಕರಣ ಮುಗಿದಿದ್ದು ಪೋಸ್ಟ್. ಪ್ರೊಡಕ್ಷನ್‌ನಲ್ಲಿ ಚಿತ್ರತಂಡ ಬ್ಯುಸಿಯಾಗಿದೆ. 'ಮಾರ್ನಮಿ' ಸಿನಿಮಾಗೆ ರಿಶಿತ್ ಶೆಟ್ಟಿ ಅವರು ನಿರ್ದೇಶನ ಮಾಡಿದ್ದಾರೆ. ಇದು ಅವರ ಚೊಚ್ಚಲ ಸಿನಿಮಾ. ಚಿತ್ರಕಥೆ ಹಾಗೂ ಸಂಭಾಷಣೆ ಕೂಡ ಅವರದ್ದೇ. ಚಿತ್ರದ ಕಥೆ ಸುಧಿ ಆರ್ಯನ್ ಅವರು ಬರೆದಿದ್ದಾರೆ,ಈ ಸಿನಿಮಾದಲ್ಲಿ ರಿತ್ವಿಕ್ ಮತ್ತು ಚೈತ್ರಾ ಜೊತೆಗೆ ಸುಮನ್ ತಲ್ವಾರ್, ಸೋನು ಗೌಡ, ಪ್ರಕಾಶ್ ತುಮಿನಾಡು, ಜ್ಯೋತೀಶ್ ಶೆಟ್ಟಿ, ಸ್ವರಾಜ್ ಶೆಟ್ಟಿ, ಮೈಮ್ ರಾಮದಾಸ್, ಚೈತ್ರಾ ಶೆಟ್ಟಿ ಮುಂತಾದ ಕಲಾವಿದರು ನಟಿಸಿದ್ದಾರೆ. ಚರಣ್ ರಾಜ್ ಸಂಗೀತ ನಿರ್ದೇಶನ, ಶಿವಸೇನ ಕ್ಯಾಮೆರಾ ಕೈ ಚಳಕ, ಪ್ರತೀಕ್ ಶೆಟ್ಟಿ ಸಂಕಲನ,ವರದರಾಜ್ ಕಾಮತ್ ಕಲಾ ನಿರ್ದೇಶನ ಮಾಡಿದ್ದಾರೆ. ವರ್ಷಾ ಆಚಾರ್ಯ ವಸ್ತ್ರ ವಿನ್ಯಾಸ ಮಾಡಿದ್ದಾರೆ. 'ಗುಣಾಢ್ಯ ಪ್ರೊಡಕ್ಷನ್ಸ್' ಮೂಲಕ ಶಿಲ್ಪಾ ನಿಶಾಂತ್ ಹಾಗೂ ನಿಶಾಂತ್ 'ಮಾರ್ನಮಿ' ಸಿನಿಮಾವನ್ನು ನಿರ್ಮಾಣ ಮಾಡಿದ್ದಾರೆ.

## ಪುರಿ ಜಗನ್ನಾಥ್-ವಿಜಯ್ ಸೇತುಪತಿ ಸಿನಿಮಾಗೆ ಹರ್ಷವರ್ಧನ್ ರಾಮೇಶ್ವರ್ ಎಂಟ್ರಿ

ನಿರ್ದೇಶಕ ಪುರಿ ಜಗನ್ನಾಥ್ ಹಾಗೂ ಪ್ರತಿಭಾನ್ವಿತ ನಟ ವಿಜಯ್ ಸೇತುಪತಿ ಸಿನಿಮಾದಿಂದ ಹೊಸ ಅಪ್ ಡೇಟ್ ಸಿಕ್ಕಿದೆ.



ಈಗಾಗಲೇ ತಾರಾಬಳಗದ ಮೂಲಕ ಸುದ್ದಿಯಲ್ಲಿರುವ ಈ ಚಿತ್ರಕ್ಕೆ ರಾಷ್ಟ್ರಪ್ರಶಸ್ತಿ ವಿಜೇತ ಸಂಗೀತ ನಿರ್ದೇಶಕ ಹರ್ಷವರ್ಧನ್ ರಾಮೇಶ್ವರ್ ಎಂಟ್ರಿ ಕೊಟ್ಟಿದ್ದಾರೆ. ಸೂಪರ್ ಹಿಟ್ ಸಿನಿಮಾಗಳಾದ ಅರ್ಜುನ್ ರೆಡ್ಡಿ, ಕಬೀರ್ ಸಿಂಗ್, ಅನಿಮಲ್ ಸೇರಿದಂತೆ ಅನೇಕ ಚಿತ್ರಗಳಿಗೆ ಹರ್ಷವರ್ಧನ್ ಮ್ಯೂ ಸಿಕ್ ಒದಗಿಸಿದ್ದಾರೆ. ಇದೀಗ ಇವರೇ ಪುರಿ ಹಾಗೂ ಸೇತುಪತಿ ಚಿತ್ರಕ್ಕೆ ಸಂಗೀತ ನಿರ್ದೇಶನ ಮಾಡಲಿದ್ದಾರೆ. ಬಾಲಿವುಡ್ ನಟಿ ಟಬು, ದುನಿಯಾ ವಿಜಯ್, ನಟಿ ಸಂ ಯುಕ್ತ ಮೆನನ್, ಬ್ರಹ್ಮಾನಂದ್ ಹಾಗೂ ವಿಟಿವಿ ಗಣೇಶ್ ಚಿತ್ರದಲ್ಲಿ ನಟಿಸುತ್ತಿದ್ದಾರೆ. ಪುರಿ ಜಗನ್ನಾಥ್ ಅವರ ಪುರಿ ಕನೆಕ್ಟ್ ಬ್ಯಾನರ್ ಅಡಿ ಹಾಗೂ ಜೆಬಿ ನಾರಾಯಣ್ ರಾವ್ ಕೊಂಡ್ರೊಲ್ಲಾ ಅವರ ಜೆಬಿ ಮೋಷನ್ ಪಿಕ್ಚರ್ಸ್ ಹಾಗೂ ಚಾರ್ಮಿ ಕೌರ್ ಈ ಚಿತ್ರವನ್ನು ನಿರ್ಮಿಸುತ್ತಿದ್ದಾರೆ.

## ಸಾಕಷ್ಟು ಸದ್ದು ಮಾಡುತ್ತಿರುವ ಮಾರುತ ನ.21ಕ್ಕೆ ತೆರೆಗೆ

ಡಾ॥ಎಸ್ ನಾರಾಯಣ್ ನಿರ್ದೇಶನದ, ದುನಿಯಾ ವಿಜಯ್ ಹಾಗೂ ಶ್ರೇಯಸ್ ಮಂಜು ಪ್ರಮುಖಪಾತ್ರದಲ್ಲಿ ನಟಿಸಿರುವ ಮತ್ತು ಕೆ.ಮಂಜು-ರಮೇಶ್ ಯಾದವ್ ಈಶಾ ಪ್ರೊಡಕ್ಷನ್ಸ್ ಲಾಂಛನದಲ್ಲಿ ನಿರ್ಮಿಸಿರುವ ಬಹು ನಿರೀಕ್ಷಿತ 'ಮಾರುತ' ಚಿತ್ರ ಆರಂಭದಿಂದಲೂ ಸಾಕಷ್ಟು ಸದ್ದು ಮಾಡುತ್ತಿದೆ. ಈಗಾಗಲೇ ಟೀಸರ್, ಟ್ರೇಲರ್ ಹಾಗೂ ಹಾಡುಗಳ ಮೂಲಕ ಜನರ ಮನಸ್ಸಿಗೆ ಹತ್ತಿರವಾಗಿದೆ. ನಿಗದಿಯಂತೆ ಇದೇ ಅ. 31ರಂದು 'ಮಾರುತ' ಚಿತ್ರ ರಾಜ್ಯಾದ್ಯಂತ ಬಿಡುಗಡೆಯಾಗಬೇಕಿತ್ತು. ಪ್ರಸ್ತುತ ಚಿತ್ರಮಂದಿರಗಳ ಅಭಾವವಿರುವ ಕಾರಣ ಚಿತ್ರತಂಡ 'ಮಾರುತ' ಚಿತ್ರದ ಬಿಡುಗಡೆಯನ್ನು 3 ವಾರ ಮುಂದೂಡಿದೆ. ನ.21ರಂದು 'ಮಾರುತ' ಚಿತ್ರ ಬಿಡುಗಡೆಯಾಗಲಿದೆ.



## ಟೀಸರ್‌ನಲ್ಲೇ ಮೋಡಿ ಮಾಡಿದ 'ಉಡಾಳ'

ಯೋಗರಾಜ್ ಸಿನಿಮಾಸ್ ಹಾಗೂ ರವಿ ಶಾಮನೂರು ಫಿಲಂಸ್ ಲಾಂಛನದಲ್ಲಿ ದಾವಣಗೆರೆಯ ರವಿ ಶಾಮನೂರು ಹಾಗೂ ಯೋಗರಾಜ್ ಭಟ್ ಅವರು ನಿರ್ಮಿಸಿರುವ, ಅಮೋಲ್ ಪಾಟೀಲ್ ನಿರ್ದೇಶನದಲ್ಲಿ ಪೃಥ್ವಿ ಶಾಮನೂರು ನಾಯಕನಾಗಿ ನಟಿಸಿರುವ "ಉಡಾಳ" ಚಿತ್ರದ ಟೀಸರ್ "ಸರಿಗಮ" ಯೂಟ್ಯೂಬ್ ಚಾನಲ್ ಮೂಲಕ ಬಿಡುಗಡೆಯಾಗಿದೆ. ಟೀಸರ್ ಗೆ ಮೆಚ್ಚುಗೆಯ ಮಹಾಪೂರವೇ ಹರಿದು ಬರುತ್ತಿದೆ. ಉತ್ತರ ಕರ್ನಾಟಕದ ಹಿನ್ನೆಲೆ ಧ್ವನಿಯಲ್ಲಿ ಮೂಡಿಬಂದಿರುವ "ಉಡಾಳ" ಚಿತ್ರದ ಟೀಸರ್‌ಗೆ ನೋಡುಗರು ಫಿದಾ ಆಗಿದ್ದಾರೆ. ಚಿತ್ರೀಕರಣ ಹಾಗೂ ನಂತರದ ಚಟುವಟಿಕೆಗಳನ್ನು ಪೂರ್ಣಗೊಳಿಸಿರುವ "ಉಡಾಳ" ತೆರೆಗೆ ಬರಲು ಸಿದ್ದವಾಗಿದ್ದಾನೆ. ಇದೊಂದು ಉತ್ತರ ಕರ್ನಾಟಕ ಭಾಗದ ಚಿತ್ರವಾಗಿದ್ದು, ಇಡೀ ಚಿತ್ರೀಕರಣ ಬಿಜಾಪುರ(ವಿಜಯಪುರ)ದಲ್ಲೇ ನಡೆದಿದೆ. "ಪದವಿಪೂರ್ವ" ಚಿತ್ರದ ಮೂಲಕ ಎಲ್ಲರ ಗಮನ ಸೆಳೆದಿರುವ ಪೃಥ್ವಿ ಶಾಮನೂರು "ಉಡಾಳ" ಚಿತ್ರದ ನಾಯಕನಾಗಿ ಅಭಿನಯಿಸಿದ್ದಾರೆ.



## ವಿಜಯ್ ದೇವರಕೊಂಡ ಹೊಸ ಸಿನಿಮಾದ ಮುಹೂರ್ತ ಸಂಭ್ರಮ

ಟಾಲಿವುಡ್ ನಟ ವಿಜಯ್ ದೇವರಕೊಂಡ ಹೊಸ ಸಿನಿಮಾ ಸೆಟ್ಟೇರಿದೆ. ಹೈದರಾಬಾದ್‌ನಲ್ಲಿ ನಿನ್ನೆ ಮುಹೂರ್ತ ನೆರವೇರಿದ್ದು, ಖ್ಯಾತ ನಿರ್ಮಾಪಕ ಅಲ್ಲು ಅರವಿಂದ್ ಚಿತ್ರಕ್ಕೆ ಕ್ಲಾಪ್ ಮಾಡಿದರು. ನಿರ್ಮಾಪಕ ನಿರಂಜನ್ ರೆಡ್ಡಿ ಕ್ಯಾಮೆರಾ ಆನ್ ಮಾಡಿದರು ಮತ್ತು ನಿರ್ದೇಶಕ ಹನು ರಾಘವಪುಡಿ ಮೊದಲ ದೃಶ್ಯವನ್ನು ನಿರ್ದೇಶಿಸಿದರು. ಶ್ರೀ ವೆಂಕಟೇಶ್ವರ ಕ್ರಿಯೇಷನ್ಸ್ ಬ್ಯಾನರ್ ಅಡಿಯಲ್ಲಿ ಯಶಸ್ವಿ ನಿರ್ಮಾಪಕರಾದ ದಿಲ್ ರಾಜು ಮತ್ತು ಶಿರೀಶ್ ಚಿತ್ರ ನಿರ್ಮಾಣ ಮಾಡುತ್ತಿದ್ದಾರೆ. ರಾಜಾವಾರು ರಾಣಿ ಗಾರು ಚಿತ್ರದ ಮೂಲಕ ಖ್ಯಾತಿ ಪಡೆದ ಪ್ರತಿಭಾನ್ವಿತ ನಿರ್ದೇಶಕ ರವಿಕಿರಣ್ ಕೋಲಾ ಈ ಪ್ರಾಜೆಕ್ಟ್‌ಗೆ ಆಕ್ಷನ್‌ಕಟ್ ಹೇಳುತ್ತಿದ್ದಾರೆ. ಶ್ರೀ ವೆಂಕಟೇಶ್ವರ ಕ್ರಿಯೇಷನ್ಸ್ ಬ್ಯಾನರ್ ಅಡಿಯಲ್ಲಿ ಮೂಡಿ ಬರುತ್ತಿರುವ 59ನೇ ಚಿತ್ರ ಇದಾಗಿದೆ. ವಿಜಯ್ ದೇವರಕೊಂಡಗೆ ಜೋಡಿಯಾಗಿ ಮಹಾನಟಿ ಖ್ಯಾತಿಯ ಕೀರ್ತಿಸುರೇಶ್ ಸಾಥ್ ಕೊಡಲಿದ್ದಾರೆ. ಗ್ರಾಮೀಣ ಆಕ್ಷನ್ ಡ್ರಾಮಾ ಹಿನ್ನೆಲೆಯಲ್ಲಿ ಸಿನಿಮಾ ಮೂಡಿ ಬರಲಿದೆ.



## 'ಫ್ರಾಡ್ ಋಷಿ' ಚಿತ್ರದ ಮೂರನೇ ಹಾಡು ಬಿಡುಗಡೆ ಮಾಡಿದ ನಮ್ ಋಷಿ

'ಒಳಿತು ಮಾಡು ಮನುಸ' ಹಾಡಿನ ಖ್ಯಾತಿಯ ನಮ್ ಋಷಿ, ನಿರ್ಮಾಣ, ನಿರ್ದೇಶನ ಹಾಗೂ ನಟನೆ 'ಫ್ರಾಡ್ ಋಷಿ' ಚಿತ್ರದ ಮೂರನೇ ಹಾಡು 'ನೀ ಹೆಜ್ಜೆ ಇಟ್ಟ ಕಡೆಯಲ್ಲೆಲ್ಲ ಗೆಜ್ಜೆನಾದ' ಎಂಬ ಹಾಡಿನ ಬಿಡುಗಡೆ ಸಮಾರಂಭ ಇತ್ತೀಚೆಗೆ ನೆರವೇರಿತು. ಡಾ॥ವಿ. ನಾಗೇಂದ್ರಪ್ರಸಾದ್ ಅವರು ನಮ್ ಋಷಿ ಬರೆದಿರುವ ರಾಜೇಶ್ ಕೃಷ್ಣನ್ ಹಾಡಿರುವ ಈ ಹಾಡನ್ನು ಬಿಡುಗಡೆ ಮಾಡಿದರು. ಹಾಡು ಬಿಡುಗಡೆ ನಂತರ ಅತಿಥಿಗಳು ಹಾಗೂ ಚಿತ್ರತಂಡದ ಸದಸ್ಯರು ಮಾತನಾಡಿದರು. ನಾನು ಹಲವು ವರ್ಷಗಳಿಂದ ಋಷಿ ಅವರನ್ನು ಬಲ್ಲೆ. ಅವರ 'ಒಳಿತು ಮಾಡು ಮನುಸ' ಹಾಡು ಯಾವ ರೀತಿ ಸೂಪರ್ ಹಿಟ್ ಆಗಿದೆ ಎಂದು ಎಲ್ಲರಿಗೂ ತಿಳಿದ ಸಂಗತಿ. ನಾನು ಕೂಡ ಆ ಹಾಡಿಗೆ ಅಭಿಮಾನಿ. ಗೀತರಚನೆಕಾರ ಋಷಿ ಈಗ ನಾಯಕನಾಗಿದ್ದಾರೆ. ಅವರ ಹೊಸ ಚಿತ್ರಕ್ಕೆ ನನ್ನ ಶುಭ ಹಾರೈಕೆಗಳು ಎಂದರು ಡಾ॥ವಿ.ನಾಗೇಂದ್ರಪ್ರಸಾದ್. ನಾನೇ ಬರೆದಿರುವ ಈ ಹಾಡನ್ನು ಜನಪ್ರಿಯ ಗಾಯಕ ರಾಜೇಶ್ ಕೃಷ್ಣನ್ ಹಾಡಿದ್ದಾರೆ.






ಕರಾವಳಿ ತರಂಗಿಣಿ

# ಸಿನಿ ತರಂಗಿಣಿ















KARAVALI THARANGINI Weekly Owned, Editor, Published & Printed by Lalithasri Preetham Rai No.2-64/54(12), Pushparaj Nilaya, Jayanagara, 3rd 'A' Maroli Village, Dakshina Kannada, Karnataka - 575005.
email: karavalitharangini@gmail.com, web: karavalitharangini.com ph: 9880109212 Printed at Bhima Samskruthi Printers & Publishers, No 1182 14th Main Road Prakash Nagar, Bengaluru Karnataka-560021